# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಯಾವಾಗ ಧರ್ಮದ ಅವನತಿ ಆಗುವುದೋ
ಯಾವಾಗ ಅಧರ್ಮದಲ್ಲಿ ಉನ್ನತಿ ಆಗುವುದೋ
ಆಗೆಲ್ಲಾ ಸತ್ಪುರುಷರ ಉದ್ಧಾರಕ್ಕಾಗಿ,
ಅಧರ್ಮಿಯರ ವಿನಾಶಕ್ಕಾಗಿ,
ಧರ್ಮದ ಪುನಃಸ್ಥಾಪನೆಗಾಗಿ
ನಾನು ಮತ್ತೆ ಮತ್ತೆ ಜನ್ಮ ತಾಳುತ್ತೇನೆ..
ಇದು ಪ್ರತಿ ಯುಗದಲ್ಲಿಯೂ ಆಗುತ್ತಲಿದೆ..
ಮುಂದೆಯೂ ಸದಾ ಆಗುತ್ತಲೇ ಇರುವುದು..
**ಭಗವಾನ್ ಶ್ರೀಕೃಷ್ಣ**




REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 21-03-2025 to 27-03-2025 ಬೆಲೆ: 7-00 ಸಂಪುಟ–4 ಸಂಚಿಕೆ–39 ಪುಟಗಳು–6














ಒಂದು ಕಡೆ ಬೇಸಿಗೆಯ ಬಿರುಬಿಸಿಲು ಜನರನ್ನು ಸುಡುವಂತಿದ್ದರೆ, ಇನ್ನೊಂದೆಡೆ ಮಕ್ಕಳಿಗೆ ಪರೀಕ್ಷೆಯು ಬಿಸಿ ಹೆಚ್ಚಿಸುತ್ತಿದೆ. ಮಕ್ಕಳಿಗೆ ಪರೀಕ್ಷೆ ಮುಗಿದೊಡನೆ ರಜಾ ಪ್ರಾರಂಭವಾಗುತ್ತಿದೆ. ಹಿಂದಿನ ಕಾಲದಂತೆ ಶಾಲೆಗೆ ರಜಾ ಬಂದ ಕೂಡಲೇ ಅಜ್ಜಿ ಮನೆಗೋ ಸಂಬಂಧಿಕರ ಮನೆಗೋ ಹೋಗಿ ಮಕ್ಕಳೆಲ್ಲಾ ಸೇರಿ ರಜಾದಲ್ಲಿ ಮಜಾ ಮಾಡುವ ಪರಿಸ್ಥಿತಿ ಇಂದು ಇಲ್ಲ. ಹೆತ್ತವರು ಈಗಾಗಲೇ ಸಮ್ಮರ್ ಕ್ಯಾಂಪ್‌ಗಳನ್ನು ಹುಡುಕುತ್ತಿರುತ್ತಾರೆ. ಇದರ ನಡುವೆ ರಜಾದಲ್ಲಿ ಮಕ್ಕಳು ಮೊಬೈಲ್ ಚಟ ಬೆಳೆಸಿಕೊಳ್ಳದಂತೆ ನೋಡಿಕೊಳ್ಳುವ ಜವಾಬ್ದಾರಿ ಕೂಡ ಹೆತ್ತವರ ಹೆಗಲ ಮೇಲಿದೆ ಎನ್ನುವುದನ್ನು ಮರೆಯಬಾರದು.

## ಕಾಂಗ್ರೆಸ್‌ನಿಂದ ಬೆಲೆ ಏರಿಕೆಯ ಗ್ಯಾರಂಟಿ –ವಿಜಯೇಂದ್ರ



**ಬೆಂಗಳೂರು:** ರಾಜ್ಯದಲ್ಲಿ ದರಿದ್ರ, ಜನ ವಿರೋಧಿ, ಕೆಟ್ಟ ಕಾಂಗ್ರೆಸ್ ಸರಕಾರ ಅಧಿಕಾರಕ್ಕೆ ಬಂದ ಬಳಿಕ ಈ ನಾಡಿನ ಜನತೆಗೆ ಕೊಟ್ಟ ಏಕೈಕ ಗ್ಯಾರಂಟಿ ಎಂದರೆ ಅದು ಬೆಲೆ ಏರಿಕೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ. ವೈ. ವಿಜಯೇಂದ್ರ ವ್ಯಂಗ್ಯವಾಡಿದ್ದಾರೆ. ಬೆಲೆ ಏರಿಕೆಯ ಗ್ಯಾರಂಟಿಯನ್ನು ಈ ರಾಜ್ಯ ಸರಕಾರ ಸರಿಯಾಗಿ ಅನುಷ್ಠಾನಕ್ಕೆ ತರುತ್ತಿದೆ. ಕಾಂಗ್ರೆಸ್ ಸರಕಾರದ ಗ್ಯಾರಂಟಿಗಳು ವಿಫಲವಾಗಿದೆ. ಬೆಲೆ ಏರಿಕೆಯಿಂದ ನಾಡಿನ ಸಾಮಾನ್ಯ ಜನರು, ಬಡವರು, ರೈತರು ಸೇರಿ ಎಲ್ಲರೂ **3ನೇ ಪುಟಕ್ಕೆ**

## ದ್ವೇಷದ ರಾಜಕಾರಣ ಎಚ್ಡಿಕೆ ಡಿಎನ್‌ಎಯಲ್ಲಿದೆ –ಡಿ.ಕೆ.ಶಿ

**ಬೆಂಗಳೂರು** –ದ್ವೇಷರಾಜಕಾರಣ ಎಂಬುದು ಕೇಂದ್ರ ಸಚಿವ ಕುಮಾರಸ್ವಾಮಿ ಡಿಎನ್‌ಎಯಲ್ಲಿದೆ. ಕೇತಗಾನಹಳ್ಳಿ ಜಮೀನು ವಿಚಾರವಾಗಿ ಕೇಸ್ ದಾಖಲಿಸಿರುವುದು ಎಸ್. ಆರ್ ಹಿರೇಮತ್ ಅವರು. ಕೋರ್ಟ್ ಆದೇಶದಂತೆ ಅಧಿಕಾರಿಗಳು ಕೆಲಸ ಮಾಡಿದ್ದು, ನಾವು ಹೇಗೆ ದ್ವೇಷ ರಾಜಕಾರಣ ಮಾಡಿದ್ದೇವೆ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಪ್ರಶ್ನಿಸಿದ್ದಾರೆ. ಕೇಂದ್ರ ಸಚಿವ ಕುಮಾರಸ್ವಾಮಿ ಕೇತಗಾನಹಳ್ಳಿ ಜಮೀನು ಒತ್ತುವರಿ ತೆರವು ದ್ವೇಷದ ರಾಜಕಾರಣ ಎಂಬ ಆರೋಪದ ಬಗ್ಗೆ ವಿಧಾನ ಸೌಧದ ಆವರಣದಲ್ಲಿ ಮಾಧ್ಯಮಗಳ ಮಾತನಾಡಿದ ಅವರು, "ಈ **3ನೇ ಪುಟಕ್ಕೆ**



## ಹಕ್ಕಿಗಳ ಚೀರಾಟ ನೋಡಿ ಕಾಡು ಬೆಳೆಸಲು ಹೊರಟ ಮನುಷ್ಯ!

**ಮಂಗಳೂರು:** 2011ರಲ್ಲಿ ಮಾರ್ಗದ ಕೆಲಸಕ್ಕಾಗಿ ದೊಡ್ಡ ಮರವೊಂದನ್ನು ಕಡಿದು ಹಾಕಿದ ಹಿನ್ನೆಲೆಯಲ್ಲಿ ಮರದಲ್ಲಿ ಗೂಡು ಕಟ್ಟಿದ್ದ ಹಕ್ಕಿಗಳ ಚೀರಾಟ ನೋಡಿದೆ. ಅದು ನನ್ನ ಮನ ಕಳಕಿತು. ಕಾಡಿನ ಮೇಲೆ ವಿಶೇಷ ಪ್ರೀತಿ ಚಿಕ್ಕಂದಿನಲ್ಲೇ ಇತ್ತು. ಗುಜರಾತ್‌ನಲ್ಲಿ ಸಣ್ಣ ಕಾಡು ನೆಟ್ಟು ಬೆಳೆಸಿದೆ. ಅಲ್ಲಿಗೆ ಹಕ್ಕಿಗಳು ಬಂದು ಗೂಡು ಕಟ್ಟಿದವು ಎಂದು ತನ್ನ ಕಾಡಿನ ಮೇಲಿನ ಪ್ರೀತಿಯನ್ನು ಬಿಚ್ಚಿಟ್ಟ "ಗ್ರೀನ್ ಮ್ಯಾನ್ ಆಫ್ ಇಂಡಿಯಾ" ಖ್ಯಾತಿಯ ಆರ್ ಕೆ ನಾಯರ್. ಮಂಗಳೂರು ಪ್ರೆಸ್ ಕ್ಲಬ್‌ನಲ್ಲಿ ಗೌರವ ಅತಿಥಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಪ್ರೆಸ್ **3ನೇ ಪುಟಕ್ಕೆ**











# ಸುದ್ದಿ ತುಣುಕು

ಗೋವುಗಳ ರಕ್ಷಣೆ ಹಾಗೂ ಗೋಮಾಂಸ ವಿಚಾರ ವಿಧಾನಸಭೆಯಲ್ಲಿ ಪ್ರತಿಧ್ವನಿಸಿ, ಬಿಜೆಪಿ ಶಾಸಕ ಶರಣು ಸಲಗಾರ್ ಹಾಗೂ ಕಾರ್ಮಿಕ ಸಚಿವ ಸಂತೋಷ್ ಲಾಡ್ ನಡುವೆ ಜಟಾಪಟಿ ನಡೆಯಿತು.

ಹುಬ್ಬಳ್ಳಿ – ಧಾರವಾಡ ಭಾಗದಲ್ಲಿ ಸುಪ್ರೀಂ ಕೋರ್ಟ್ ವಿಭಾಗೀಯ ಪೀಠವನ್ನು ಸ್ಥಾಪಿಸಬೇಕು ಎಂದು ಕಾಂಗ್ರೆಸ್ ಶಾಸಕ ಎನ್.ಹೆಚ್. ಕೋನರೆಡ್ಡಿ ಒತ್ತಾಯಿಸಿದ್ದಾರೆ.

ಬೆಳಗಾವಿಯಲ್ಲಿ ಎಂಇಎಸ್ ಪುಂಡಾಟಿಕೆ ವಿರೋಧಿಸಿ ವಾಟಾಳ್ ನಾಗರಾಜ್ ನೇತೃತ್ವದ ಕನ್ನಡ ಒಕ್ಕೂಟವು ಮಾ.22ರಂದು ಕರೆ ನೀಡಿರುವ ಕರ್ನಾಟಕ ಬಂದ್‌ಗೆ ಬೆಂಬಲವಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲರ ಕ್ರಮ ಎತ್ತಿ ಹಿಡಿದಿದ್ದ ಏಕಸದಸ್ಯ ಪೀಠದ ಆದೇಶವನ್ನು ಪ್ರಶ್ನಿಸಿರುವ ಮೇಲ್ಮನವಿ ಅರ್ಜಿ ವಿಚಾರಣೆಯನ್ನು ಹೈಕೋರ್ಟ್ ಏಪ್ರಿಲ್ 28ಕ್ಕೆ ನಿಗದಿಪಡಿಸಿದೆ.

ಕರಾವಳಿ ಜಿಲ್ಲೆಯಲ್ಲಿ ಬೇಸಿಗೆಯ ಉರಿಬಿಸಿಲು ಜನರನ್ನು ಹೈರಾಣು ಮಾಡಿದೆ. ಫೆಬ್ರವರಿಯಲ್ಲಿ ಶುರುವಾದ ಬಿಸಿಲ ಧಗೆಯಲ್ಲಿ ಸಂಚಾರವೇ ದುಸ್ತರವಾಗಿದೆ. ಪರಿಣಾಮವಾಗಿ ಎಳನೀರಿಗೆ ಬೇಡಿಕೆ ಹೆಚ್ಚಾಗಿದೆ.

2024–25ರ ಸಾಲಿಗೆ 13,823.47 ಕೋಟಿ ರೂ. ಮೊತ್ತದ ಅಂತಿಮ ಪೂರಕ ಅಂದಾಜನ್ನು ವಿಧಾನಸಭೆಯಲ್ಲಿ ಮಂಡಿಸಲಾಗಿದೆ.

ಕಡಬ ಸರ್ಕಾರಿ ಹಾಸ್ಟೆಲ್‌ಗೆ ಲೋಕಾಯುಕ್ತ ಅಧಿಕಾರಿಗಳ ತಂಡ ದಿಢೀರ್ ಭೇಟಿ ನೀಡಿ, ಕಳಪೆ ಆಹಾರ ಪೂರೈಕೆ ಸೇರಿದಂತೆ ಅವ್ಯವಸ್ಥೆಯನ್ನು ಪತ್ತೆ ಹಚ್ಚಿದೆ.

ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಇಂಜಿನಿಯರ್‌ಗಳ ನೇಮಕ ಅಕ್ರಮ ಕುರಿತು ಕೆಪಿಎಸ್‌ಸಿ ಪತ್ರದ ಹೊರತಾಗಿಯೂ ನೇಮಕಾತಿ ಆದೇಶ ನೀಡಿರುವುದಕ್ಕೆ ವಿವರಣೆ ನೀಡಬೇಕು ಎಂದು ಹೈಕೋರ್ಟ್ ಸರ್ಕಾರಕ್ಕೆ ಸೂಚಿಸಿದೆ.

ಮಹಾರಾಷ್ಟ್ರದ ನಾಗ್ಪುರದಲ್ಲಿ ನಡೆದ ಹಿಂಸಾಚಾರದ ಹಿಂದೆ ಬಾಂಗ್ಲಾದೇಶಿಗರ ನಂಟು ಇರುವ ಬಗ್ಗೆ ಪೊಲೀಸರು ಪುರಾವೆಗಳನ್ನು ಕಲೆ ಹಾಕಿದ್ದಾರೆ. ಬಾಂಗ್ಲಾದೇಶಿಗಳಿಗೆ ಸಂಬಂಧಿಸಿದ ಖಾತೆಗಳು ಪತ್ತೆಯಾಗಿವೆ. ಆ ಖಾತೆಗಳಲ್ಲಿ ಹಿಂಸೆಯ ವಿಡಿಯೋಗಳನ್ನು ಹಂಚಿಕೊಳ್ಳಲಾಗಿದೆ ಎಂದು ಅಧಿಕಾರಿ ಮಾಹಿತಿ ನೀಡಿದ್ದಾರೆ.

ಮೆಕ್‌ಡೋನಾಲ್ಡ್ ಭಾರತದಲ್ಲಿ ತನ್ನ ಜಾಗತಿಕ ಕಚೇರಿಯನ್ನು ಹೈದರಾಬಾದ್‌ನಲ್ಲಿ ತೆರೆಯುವುದಾಗಿ ಘೋಷಿಸಿದೆ. ಇದರಿಂದ ಹೂಡಿಕೆ ಕೇಂದ್ರವಾಗಿ ಬೆಳೆಯುತ್ತಿರುವ ಮುತ್ತಿನ ನಗರಿಗೆ ದೊಡ್ಡ ಉತ್ತೇಜನ ಸಿಗಲಿದೆ.

ಶಂಭು ಗಡಿಯಿಂದ ಪ್ರತಿಭಟನಾನಿರತ ರೈತರ ತೆರವಿನ ಬೆನ್ನಲ್ಲೇ ಹರಿಯಾಣ ಭದ್ರತಾ ಸಿಬ್ಬಂದಿ, ಪಂಜಾಬ್ ರೈತರು ದೆಹಲಿ ಪ್ರವೇಶಿಸುವುದನ್ನು ತಡೆಯಲು ನಿರ್ಮಿಸಿದ್ದ ಸಿಮೆಂಟ್ ಬ್ಯಾರಿಕೇಡ್‌ಗಳನ್ನು ತೆರವುಗೊಳಿಸಲು ಮುಂದಾಗಿದ್ದಾರೆ.

ರಷ್ಯಾ ಮತ್ತು ಉಕ್ರೇನ್ ಸಂಘರ್ಷ ನಿವಾರಣೆ ಸೇರಿದಂತೆ ಜಾಗತಿಕ ಶಾಂತಿಗೆ ಆಗ್ರಹಿಸಿ ರಷ್ಯಾ ಪ್ರವಾಸಿಗರ ತಂಡವೊಂದು ಐತಿಹಾಸಿಕ ಜಲ್ ಮಹಲ್ ಪ್ರದೇಶದಲ್ಲಿರುವ ಪ್ರಾಚೀನಾ ಸಂಕಟ್ ಮೋಚ್ರ್ಾ ಹನುಮಾನ್ ದೇಗುಲದಲ್ಲಿ ಹವನ ಮತ್ತು ಜಲಾಭಿಷೇಕ ನಡೆಸಿದೆ.

ಮಹಾಕುಂಭಮೇಳದಲ್ಲಿ ಸಂಭವಿಸಿದ ಕಾಲ್ತುಳಿತ ಘಟನೆಗೆ ಸಂಬಂಧಿಸಿದಂತೆ ಸಾಕ್ಷ್ಯ, ಪುರಾವೆ, ಮಾಹಿತಿ ಇದ್ದಲ್ಲಿ ನೀಡಲು ತನಿಖಾ ಆಯೋಗವು ಸಾರ್ವಜನಿಕರಲ್ಲಿ ಮನವಿ ಮಾಡಿದೆ.

ಹೀಟ್ ವೇವ್ ಅನ್ನು ವಿಪತ್ತು ನಿರ್ವಹಣಾ ಯೋಜನೆಗೆ ಸೇರಿಸುವಂತೆ ಸಂಸದೀಯ ಸಮಿತಿ ಶಿಫಾರಸು ಮಾಡಿದೆ.

# ಬಸಳೆ ಸೊಪ್ಪು ತಂಬುಳಿ



**ಬೇಕಾಗುವ ಸಾಮಾಗ್ರಿಗಳು :**

ಬಸಳೆಸೊಪ್ಪು – 1 ಕಪ್
ಜೀರಿಗೆ – 1/2 ಚಮಚ
ಕಾಳುಮೆಣಸು – 1/2 ಚಮಚ
ತೆಂಗಿನತುರಿ – 1/4 ಕಪ್
ಮೊಸರು – 1/2 ಕಪ್
ಒಣ ಮೆಣಸಿನಕಾಯಿ – 1
ತುಪ್ಪ – 2 ಚಮಚ
ಸಾಸಿವೆ – 1/4 ಚಮಚ
ರುಚಿಗೆ ತಕ್ಕಷ್ಟು ಉಪ್ಪು

**ಮಾಡುವ ವಿಧಾನ :**

ಬಸಳೆ ಸೊಪ್ಪನ್ನು ಚೆನ್ನಾಗಿ ತೊಳೆದು ಕತ್ತರಿಸಿಕೊಳ್ಳಬೇಕು. ನಂತರ ಒಂದು ಬಾಣಲೆಯಲ್ಲಿ ಒಂದು ಚಮಚ ತುಪ್ಪ ಹಾಕಿ ಜೀರಿಗೆ ಮತ್ತು ಕಾಳುಮೆಣಸನ್ನು ಹುರಿದುಕೊಳ್ಳಬೇಕು. ನಂತರ ಕತ್ತರಿಸಿದ ಬಸಳೆ ಸೊಪ್ಪನ್ನು ಹಾಕಿ ಬಾಡಿಸಿಕೊಳ್ಳಬೇಕು. ಬಾಡಿಸಿದ ಆರಿದ ಸೊಪ್ಪು, ಕಾಳುಮೆಣಸು, ಜೀರಿಗೆ ಮತ್ತು ತೆಂಗಿನ ತುರಿಯನ್ನು ಮಿಕ್ಸಿ ಜಾರಿಗೆ ನೀರು ಸೇರಿಸಿಕೊಂಡು ನುಣ್ಣಗೆ ರುಬ್ಬಬೇಕು. ನಂತರ ಈ ಮಿಶ್ರಣವನ್ನು ಒಂದು ಪಾತ್ರೆಗೆ ಹಾಕಿ. ಅದಕ್ಕೆ ಉಪ್ಪು, ಮೊಸರು ಮಿಶ್ರಣ ಮಾಡಿಕೊಂಡು ಅದಕ್ಕೆ ತುಪ್ಪ, ಒಣಮೆಣಸು ಮತ್ತು ಸಾಸಿವೆ ಒಗ್ಗರಣೆ ಕೊಟ್ಟರೆ ರುಚಿಕರವಾದ ಮತ್ತು ಆರೋಗ್ಯಕರ ಬಸಳೆ ಸೊಪ್ಪು ತಂಬುಳಿ ಸವಿಯಲು ಸಿದ್ದ.

# ಕದನ ವಿರಾಮಕ್ಕೆ ಒಪ್ಪಿದ ರಷ್ಯಾ



ಯುಎಸ್‌ಎ: ಉಕ್ರೇನ್–ರಷ್ಯಾ ನಡುವೆ ಕದನ ವಿರಾಮ ಘೋಷಿಸುವ ಅಮೆರಿಕದ ಪ್ರಸ್ತಾಪವನ್ನು ವ್ಲಾಡಿಮಿರ್ ಪುಟನ್ ಒಪ್ಪಿದ್ದಾರೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಯುದ್ದ ಅಂತ್ಯಗೊಳಿಸುವ ಕುರಿತು ಮಂಗಳವಾರ ದೂರವಾಣಿ ಕರೆ ಮೂಲಕ ಸುದೀರ್ಘ ಮಾತುಕತೆ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಉಕ್ರೇನ್‌ನ ಇಂಧನ ಮೂಲಸೌಕರ್ಯಕ್ಕಾಗಿ 30 ದಿನಗಳ ತಕ್ಷಣದ ಸಣ್ಣ ಕದನ ವಿರಾಮಕ್ಕೆ ರಷ್ಯಾ ಒಪ್ಪಿಗೆ ಸೂಚಿಸಿದೆ.

# ಗಾಜಾ ಮೇಲೆ ಇಸ್ರೇಲ್ ವೈಮಾನಿಕ ದಾಳಿ

ಇಸ್ರೇಲ್ : ಕದನ ವಿರಾಮ ಉಲ್ಲಂಘಿಸಿ ಇಸ್ರೇಲ್ ಮಂಗಳವಾರ ನಸುಕಿನಲ್ಲಿ ಹಮಾಸ್ ಗುರಿಯಾಗಿಸಿ ಗಾಜಾ ಪಟ್ಟಿ ಮೇಲೆ ವೈಮಾನಿಕ ದಾಳಿ ನಡೆಸಿದ್ದು, ಕನಿಷ್ಠ 200 ಮಂದಿ ಸಾವನ್ನಪ್ಪಿದ್ದಾರೆ ಎಂದು ಪ್ಯಾಲೇಸ್ತೇನಿಯನ್ ಅಧಿಕಾರಿಗಳು ತಿಳಿಸಿದ್ದಾರೆ. ವೈದ್ಯಕೀಯ ಅಧಿಕಾರಿಗಳ ಪ್ರಕಾರ, ದಾಳಿಯಲ್ಲಿ 66 ಜನರು ಸಾವನ್ನಪ್ಪಿದ್ದು, 150ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ. ಉತ್ತರ ಗಾಜಾ, ಧೀರ್ ಆಲ್ ಬಲಹಾ, ಖಾನ್ ಯೂನಿಸ್, ರಫಾ ಮತ್ತು ಗಾಜಾ ನಗರದ ಮೇಲೆ ದಾಳಿ ನಡೆಸಲಾಗಿದೆ.



# ಪ್ರಧಾನಿ ಮೋದಿಯ ಪಾಡ್ ಕಾಸ್ಟ್ ಹಂಚಿಕೊಂಡ ಟ್ರಂಪ್



ವಾಷಿಂಗ್ಟನ್ : ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಮೂಲದ ಪಾಡ್‌ಕಾಸ್ಟರ್ ಲೆಕ್ಸ್ ಫ್ರಿಡ್‌ಮನ್ ಅವರೊಂದಿಗಿನ ಮೂರು ಗಂಟೆಗಳ ಸಂದರ್ಶನದ ಪಾಡ್‌ಕಾಸ್ಟ್ ಅನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಸೋಮವಾರ ಬೆಳಗ್ಗೆ (ಭಾರತೀಯ ಸಮಯ) ತಮ್ಮ ಸಾಮಾಜಿಕ ಮಾಧ್ಯಮ ಟ್ರುತ್ ಸೋಶಿಯಲ್‌ನಲ್ಲಿ ಹಂಚಿಕೊಂಡಿದ್ದಾರೆ. ಶೇರ್ ಮಾಡಿರುವ ಈ ಪೋಸ್ಟ್‌ನಲ್ಲಿ, ಟ್ರಂಪ್ ಅವರು ಪ್ರಧಾನಿ ಮೋದಿ ಅವರ ಮೂರು ಗಂಟೆಗಳ ಈ ಪಾಡ್‌ಕಾಸ್ಟ್‌ನ ಲಿಂಕ್ ಹಾಕಿದ್ದಾರೆ.

# ಅಮೆರಿಕದಿಂದ ಭಾರತೀಯ ವಿದ್ಯಾರ್ಥಿನಿ ಸ್ವಯಂ ಗಡಿಪಾರು

ಅಮೆರಿಕ: ಹಿಂಸೆ ಮತ್ತು ಭಯೋತ್ಪಾದನೆಯನ್ನು ಪ್ರತಿಪಾದಿಸಿದ್ದಕ್ಕಾಗಿ ಹಾಗೂ ಹಮಾಸ್ ಬೆಂಬಲಿಸುವ ಚಟುವಟಿಕೆಗಳಲ್ಲಿ ಭಾಗಿಯಾಗಿರುವ ಆರೋಪದ ಮೇಲೆ ಕೊಲಂಬಿಯಾ ವಿಶ್ವವಿದ್ಯಾನಿಲಯದಲ್ಲಿ ವ್ಯಾಸಂಗ ಮಾಡುತ್ತಿದ್ದ ಭಾರತೀಯ ವಿದ್ಯಾರ್ಥಿನಿಯ ವೀಸಾ ರದ್ದುಗೊಳಿಸಲಾಗಿದೆ. ಈ ಬೆಳವಣಿಗೆ ಹಿನ್ನೆಲೆ ವಿದ್ಯಾರ್ಥಿನಿ ಸ್ವಯಂಪ್ರೇರಿತವಾಗಿ ಅಮೆರಿಕ ದೇಶದಿಂದ ಹೊರ ನಡೆದಿದ್ದಾಳೆ. ಭಾರತೀಯರಾಗಿರುವ ರಂಜನಿ ಶ್ರೀನಿವಾಸನ್ ಅವರು ಕೊಲಂಬಿಯಾ ವಿಶ್ವವಿದ್ಯಾಲಯದ ನಗರ ಯೋಜನೆಯಲ್ಲಿ ಡಾಕ್ಟರೇಟ್ ವಿದ್ಯಾರ್ಥಿಯಾಗಿ ಈ–1 ವಿದ್ಯಾರ್ಥಿ ವೀಸಾದಲ್ಲಿ ಅಮೆರಿಕಕ್ಕೆ ತೆರಳಿದ್ದರು.



# ನೀವೇ ಜಾಗತಿಕ ಭಯೋತ್ಪಾದನೆಯ ಕೇಂದ್ರ ಬಿಂದು : ಪಾಕಿಸ್ತಾನಕ್ಕೆ ಭಾರತ ತಿರುಗೇಟು



ನವದೆಹಲಿ: ತನ್ನ ದೇಶದ ವಿರುದ್ಧ ಭಯೋತ್ಪಾದನೆಗೆ ಭಾರತ ಬೆಂಬಲಿಸುತ್ತಿದೆ ಎಂಬ ಪಾಕಿಸ್ತಾನದ ಆರೋಪವನ್ನು ಸ್ಪಷ್ಟವಾಗಿ ತಿರಸ್ಕರಿಸಿರುವ ಭಾರತ, ಭಯೋತ್ಪಾದನೆಯನ್ನು ಮಟ್ಟ ಹಾಕಲು ವಿಫಲವಾಗಿರುವ ಹಾಗೂ ಸ್ವತಃ ತಾನೇ ಜಾಗತಿಕ ಭಯೋತ್ಪಾದನೆಗೆ ಕೇಂದ್ರಬಿಂದುವಾಗಿರುವ ಪಾಕಿಸ್ತಾನ ಮೊದಲಿಗೆ ತನ್ನೊಳಗೆ ಇಣುಕಿ ನೋಡಿಕೊಳ್ಳಲಿ ಎಂದು ತಿರುಗೇಟು ನೀಡಿದೆ. 21 ಜನರ ಸಾವಿಗೆ ಕಾರಣವಾದ ಬಲೂಚಿಸ್ತಾನ್ ರೈಲು ಅಪಹರಣ ಘಟನೆಯ ನಂತರ, ಭಾರತ ತನ್ನ ದೇಶದ ವಿರುದ್ಧ ಭಯೋತ್ಪಾದನೆಯನ್ನು ಬೆಂಬಲಿಸುತ್ತಿದೆ ಎಂದು ಪಾಕಿಸ್ತಾನ ಆರೋಪ ಮಾಡಿತ್ತು.

# ಇಂಡಿಯಾ ಮಾಸ್ಟರ್ಸ್‌ಗೆ ಅಂತಾರಾಷ್ಟ್ರೀಯ ಮಾಸ್ಟರ್ಸ್ ಟಿ 20 ಟ್ರೋಫಿ

ರಾಯ್ಪುರ: ಕ್ರಿಕೆಟ್ ದೇವರು ಸಚಿನ್ ತೆಂಡೂಲ್ಕರ್ ನಾಯಕತ್ವದ ಇಂಡಿಯಾ ಮಾಸ್ಟರ್ಸ್ ತಂಡವು ಚೊಚ್ಚಲ ಅಂತಾರಾಷ್ಟ್ರೀಯ ಮಾಸ್ಟರ್ಸ್ ಟಿ20 ಲೀಗ್ ಟ್ರೋಫಿಯನ್ನು ಎತ್ತಿ ಹಿಡಿದಿದೆ. ರಾಯ್ಪುರದ ಶಾಹೀದ್ ವೀರ ನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ಕ್ರಿಕೆಟ್ ದಿಗ್ಗಜ ಬ್ರಿಯಾನ್ ಲಾರಾ ನೇತೃತ್ವದ ವೆಸ್ಟ್ ಇಂಡೀಸ್ ಮಾಸ್ಟರ್ಸ್ ಪಡೆ ವಿರುದ್ಧ ಇಂಡಿಯಾ ಮಾಸ್ಟರ್ಸ್ ಗೆದ್ದು ಬೀಗಿತು.




# ಪಾಕಿಸ್ತಾನ ಕ್ರಿಕೆಟ್ ಮಂಡಳಿಗೆ ಭಾರೀ ನಷ್ಟ




ಹೈದರಾಬಾದ್ : 2025ರ ಐಸಿಸಿ ಚಾಂಪಿಯನ್ಸ್ ಟ್ರೋಫಿ ಟೂರ್ನಿಯಲ್ಲಿ ಹಿನ್ನಡೆ ಅನುಭವಿಸುವುದರ ಜೊತೆಗೆ ಪಾಕಿಸ್ತಾನ ಕ್ರಿಕೆಟ್ ಮಂಡಳಿ (ಪಿಸಿಬಿ) ಆರ್ಥಿಕವಾಗಿಯೂ ತೀವ್ರ ಸಂಕಷ್ಟ ಎದುರಿಸುವಂತಾಗಿದೆ. ಅಂತಾರಾಷ್ಟ್ರೀಯ ಕ್ರಿಕೆಟ್ ಮಂಡಳಿ (ಐಸಿಸಿ) ಜೊತೆಗಿನ ಹಲವು ಮನಸ್ತಾಪದ ಬಳಿಕ ಚಾಂಪಿಯನ್ಸ್ ಟ್ರೋಫಿಯನ್ನು ತನ್ನ ನೆಲದಲ್ಲಿ ನಡೆಸಿಕೊಡುವಲ್ಲಿ ಯಶಸ್ಸು ಕಂಡಿದ್ದ ಪಿಸಿಬಿ, ಟೂರ್ನಿಯಲ್ಲಿ ತನ್ನ ತಂಡ ಹಿನ್ನಡೆ ಅನುಭವಿಸುವುದರ ಜೊತೆಗೆ ಆರ್ಥಿಕವಾಗಿಯೂ ತೀವ್ರ ಸಂಕಷ್ಟ ಎದುರಿಸುವಂತಾಗಿದೆ.

# ಮುಂಬೈ ತಂಡ ಟ್ರೋಫಿ ಗೆಲ್ಲುತ್ತೆ: ಹಾರ್ದಿಕ್ ಪಾಂಡ್ಯ

ಮುಂಬೈ : ಮುಂಬೈ ಇಂಡಿಯನ್ಸ್ ತಂಡದ ನಾಯಕ ಹಾರ್ದಿಕ್ ಪಾಂಡ್ಯ ಇಂದು (ಬುಧವಾರ) ನಡೆದ ಪತ್ರಿಕಾಗೋಷ್ಠಿ ಮಾತನಾಡಿ, "ಈ ಬಾರಿ ಕಪ್ ಗೆಲ್ಲಲು ಸಾಕಷ್ಟು ಶ್ರಮ ವಹಿಸಲಾಗುವುದು. ಕಳೆದ ಆವೃತ್ತಿಯಲ್ಲಿ ತಂಡ ಕಳಪೆ ಸಾಧನೆ ಮಾಡಿತ್ತು. ಜೊತೆಗೆ ಕಳೆದ ನಾಲ್ಕು ಸೀಸನ್‌ಗಳೂ ತಂಡಕ್ಕೆ ಉತ್ತಮವಾಗಿಲ್ಲ. ಈ ಬಾರಿ ಅದನ್ನು ಬದಲಿಸಲಿದ್ದೇವೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.



# ರೈಲ್ವೆ ನಿಲ್ದಾಣಕ್ಕೆ ಸ್ವಾಮಿಜಿ ಹೆಸರಿಡಲು ಮುಖ್ಯಮಂತ್ರಿ ಸ್ಪಂದಿಸುತ್ತಿಲ್ಲ : ವಿ.ಸೋಮಣ್ಣ



ತುಮಕೂರು: "ನಡೆದಾಡುವ ದೇವರು ಶ್ರೀ ಶಿವಕುಮಾರ ಸ್ವಾಮೀಜಿಯ ಹೆಸರನ್ನು ತುಮಕೂರು ರೈಲ್ವೆ ನಿಲ್ದಾಣಕ್ಕೆ ಇಡಲು ರಾಜ್ಯ ಸರಕಾರ ಪರೋಕ್ಷವಾಗಿ ಹಿಂದೇಟು ಹಾಕುತ್ತಿದೆ. ಈ ಬಗ್ಗೆ ನಿಮ್ಮ ಅಭಿಪ್ರಾಯ ತಿಳಿಸಿ ಎಂದು ಕೇಂದ್ರದಿಂದ ಪತ್ರ ಬರೆದರೂ ಮುಖ್ಯಮಂತ್ರಿ ಸಿದ್ದರಾಮಯ್ಯ ಯಾವುದೇ ರೀತಿಯಲ್ಲೂ ಸ್ಪಂದಿಸುತ್ತಿಲ್ಲ" ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ದೂರಿದರು. "ನಾನೇ ಸ್ವತಃ ಒಂದಲ್ಲ, ನಾಲ್ಕೈದು ಬಾರಿ ಈ ಬಗ್ಗೆ ಮಾತನಾಡಲು ಹೋಗಿದ್ದೇನೆ. ಆದರೆ ಸಿದ್ದರಾಮಯ್ಯನವರಿಗೆ ಯಾಕೋ ಏನೋ ಆ ಪತ್ರಕ್ಕೆ ಸಹಿ ಹಾಕುವ ಮನಸ್ಸು ಇನ್ನೂ ಬಂದಿಲ್ಲ ಎಂದರು.

# ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ಪ್ರತ್ಯೇಕ ಹೀಟ್ ಸ್ಟ್ರೋಕ್ ವಾರ್ಡ್

ಕೊಪ್ಪಳ: ಉತ್ತರ ಕರ್ನಾಟಕದಲ್ಲಿ ಬಿಸಿಲಿನ ಝಳ ಹೆಚ್ಚುತ್ತಿದೆ. ಇನ್ನು ಬಿಸಿಲನಾಡೆಂದೇ ಹೆಸರಾದ ಕೊಪ್ಪಳದಲ್ಲಿ ಸೂರ್ಯನ ಪ್ರಖರತೆಗೆ ಜನ ಹೈರಾಣಾಗುತ್ತಿದ್ದಾರೆ. ಅಧಿಕ ತಾಪದಿಂದ ಸಾರ್ವಜನಿಕರಿಗೆ ಎದುರಾಗುವ ಆರೋಗ್ಯ ಸಮಸ್ಯೆಗಳಿಗೆ ಚಿಕಿತ್ಸೆ ನೀಡಲು ಕೊಪ್ಪಳ ಜಿಲ್ಲಾಸ್ಪತ್ರೆಯಲ್ಲಿ ವಿಶೇಷ ವಾರ್ಡ್ ತೆರೆಯಲಾಗಿದೆ.



ಜಿಲ್ಲೆಯಲ್ಲಿ ತಾಪಮಾನ 39 ಡಿಗ್ರಿಯವರೆಗೂ ತಲುಪಿದೆ. ಮುಂದಿನ ಒಂದು ವಾರದಲ್ಲಿ ಉಷ್ಣಾಂಶ ಇನ್ನಷ್ಟು ಏರಿಕೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಳಗ್ಗೆ 11 ಗಂಟೆಯಿಂದ ಮಧ್ಯಾಹ್ನ 4 ಗಂಟೆವರೆಗೆ ಬಿಸಿನಲ್ಲಿ ಓಡಾಡದಂತೆ ಆರೋಗ್ಯ ಇಲಾಖೆ ಸೂಚನೆ ನೀಡಿದೆ.

# ಪೌಷ್ಠಿಕಾಂಶ ಸಾಮಾಗ್ರಿ ಕಿಟ್ ವಿತರಣೆಯಲ್ಲಿ ಭ್ರಷ್ಟಾಚಾರದ ಆರೋಪ

ಬೆಂಗಳೂರು: ರಕ್ತಹೀನತೆ ಬಳಲುತ್ತಿರುವ ಕಟ್ಟಡ ಕಾರ್ಮಿಕರಿಗೆ ನೀಡಲಾಗುವ ರೋಗನಿರೋಧಕ ಹಾಗೂ ಪೌಷ್ಠಿಕಾಂಶ ಸಾಮಗ್ರಿ ಕಿಟ್ ವಿತರಣೆಯಲ್ಲಿ ಭ್ರಷ್ಟಾಚಾರ ಆರೋಪ ಕೇಳಿಬಂದಿದೆ. ಎನ್. ರವಿಕುಮಾರ್, "ಕಾರ್ಮಿಕರಿಗೆ ನೀಡಲಾಗುವ ಕಿಟ್ ವಿತರಣೆಯಲ್ಲಿ ಸರ್ಕಾರವು ಭ್ರಷ್ಟಾಚಾರವೆಸಗಿದೆ. ಸರ್ಕಾರವು ಪ್ರತಿ ಕಿಟ್‌ಗೆ 2,600 ರೂಪಾಯಿ ನೀಡಿ ಖರೀದಿಸಿದೆ. ಒಂದು ಕಿಟ್‌ಗೆ ಮಾರುಕಟ್ಟೆಯಲ್ಲಿ 950 ರೂ, ಆದರೆ ಸರ್ಕಾರವು ಪ್ರತಿ ಕಿಟ್‌ಗೆ 2,600 ರೂಪಾಯಿ ನೀಡಿ ಖರೀದಿಸಿದೆ. ಅಲ್ಲದೆ ಒಂದೇ ಕಂಪೆನಿಗೆ ಟೆಂಡರ್ ನೀಡುವ ಮೂಲಕ, ಭ್ರಷ್ಟಾಚಾರಕ್ಕೆ ಕಾರಣವಾಗಿದೆ" ಎಂದು ಆರೋಪಿಸಿದರು.



# ದೈಹಿಕ ಶಿಕ್ಷಣ ಶಿಕ್ಷಕರಿಗೆ ಮುಂಬಡ್ತಿ ನೀಡಲು ಸಾಧ್ಯವಿಲ್ಲ

ಬೆಂಗಳೂರು : ವೃಂದ ಮತ್ತು ನೇಮಕಾತಿ ನಿಯಮಗಳು ಬೇರೆ ಬೇರೆಯಾಗಿರುವುದರಿಂದ ಸರ್ಕಾರಿ ಪ್ರೌಢಶಾಲಾ ದೈಹಿಕ ಶಿಕ್ಷಣ ಶಿಕ್ಷಕರಿಗೆ ಮುಂಬಡ್ತಿ ನೀಡಲು ಸಾಧ್ಯವಿಲ್ಲ. ಅದಾಗ್ಯೂ ಮತ್ತೊಮ್ಮೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ



ಸಚಿವ ಮಧುಬಂಗಾರಪ್ಪ ಭರವಸೆ ನೀಡಿದ್ದಾರೆ. ವಿಧಾನಪರಿಷತ್‌ನ ಪ್ರಶ್ನೋತ್ತರ ವೇಳೆಯಲ್ಲಿ ರಾಮೋಜಿಗೌಡರ ಪ್ರಶ್ನೆಗೆ ಉತ್ತರಿಸಿದ ಸಚಿವರು, ಪ್ರೊ.ಎಲ್.ಆರ್ ವೈದ್ಯನಾಥನ್ ವರದಿ ಆಧರಿಸಿ ದೈಹಿಕ ಶಿಕ್ಷಕರಿಗೆ ಮುಂಬಡ್ತಿ ನೀಡುವುದನ್ನು ಪರಿಶೀಲಿಸಲಾಗುವುದು ಎಂದರು.

# ತಮ್ಮ ಮಕ್ಕಳಿಗೆ ನೀಡಿದ ಆಸ್ತಿಯನ್ನು ಮರಳಿ ಪಡೆಯಬಹುದು–ಹೈಕೋರ್ಟ್



ತಮಿಳುನಾಡು: ತಮ್ಮ ಮಕ್ಕಳು ಅಥವಾ ಹತ್ತಿರದ ಸಂಬಂಧಿಕರು ತಮ್ಮನ್ನು ನೋಡಿಕೊಳ್ಳಲು ವಿಫಲವಾದರೆ ಅಂಥವರ ಹೆಸರಿಗೆ ಬರೆಯಲಾದ ಗಿಫ್ಟ್ ಡೀಡ್ ಅಥವಾ ಸೆಟ್ಲ್‌ಮೆಂಟ್ ಡೀಡ್‌ಗಳನ್ನು ಹಿರಿಯ ನಾಗರಿಕರು ರದ್ದು ಮಾಡಬಹುದು ಎಂದು ಮದ್ರಾಸ್ ಹೈಕೋರ್ಟ್ ಮಹತ್ವದ ತೀರ್ಪು ನೀಡಿದೆ. ಡೀಡ್‌ನಲ್ಲಿ ಇಂಥ ಷರತ್ತನ್ನು ಹಾಕಿಲ್ಲವಾದರೂ ಅದನ್ನು ರದ್ದುಗೊಳಿಸಬಹುದು ಎಂದು ಕೋರ್ಟ್ ಹೇಳಿದೆ. ಮೃತ ಎಸ್. ನಾಗಲಕ್ಷ್ಮಿ ಅವರ ಸೊಸೆ ಎಸ್.ಮಾಲಾ ಸಲ್ಲಿಸಿದ್ದ ಮೇಲ್ಮನವಿಯನ್ನು ವಜಾಗೊಳಿಸಿದ ನ್ಯಾ.ಮೂಗಳಾದ ಎಸ್.ಎಂ.ಸುಬ್ರಮಣ್ಯಂ ಮತ್ತು ಕೆ.ರಾಜಶೇಖರ್ ಅವರಿದ್ದ ವಿಭಾಗೀಯ ಪೀಠ ತೀರ್ಪು ನೀಡಿತು.

# ಆಸ್ತಿಗಳಿಗೆ ಇ–ಖಾತಾ ನೀಡುವ ತಿದ್ದುಪಡಿ ವಿಧೇಯಕ ಮಂಡನೆ

ಬೆಂಗಳೂರು: ಗ್ರಾಮೀಣ ಪ್ರದೇಶಗಳ ಭೂಮಾಲೀಕರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದೆ. ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಕ್ರಮ ಬದ್ಧವಲ್ಲದ ನಿವೇಶನ ಹಾಗೂ ಕಟ್ಟಡಗಳಿಗೆ ಇ–ಖಾತಾ ನೀಡಿ ತೆರಿಗೆ ವ್ಯಾಪ್ತಿಗೆ ಒಳಪಡಿಸಲು ಕರ್ನಾಟಕ ಗ್ರಾಮ ಸ್ವರಾಜ್



ಮತ್ತು ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ, 2025 ಅನ್ನು ಅಧಿವೇಶನದಲ್ಲಿ ಮಂಡಿಸಲು ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ಸೂಚಿಸಲಾಗಿದೆ. ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ.

# ರಿಲಯನ್ಸ್ ಇಂಡಸ್ಟ್ರೀಸ್‌ನಿಂದ ರಷ್ಯಾದ ಕಚ್ಚಾ ತೈಲ ಅಮೆರಿಕಕ್ಕೆ ರಫ್ತು

ನವದೆಹಲಿ: ಬಿಲಿಯನೇರ್ ಮುಖೇಶ್ ಅಂಬಾನಿ ಅವರ ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ ಒಂದು ವರ್ಷದಲ್ಲಿ ರಷ್ಯಾದ ಕಚ್ಚಾ ತೈಲದಿಂದ ತಯಾರಿಸಿದ 724 ಮಿಲಿಯನ್ ಯುರೋ (ಸುಮಾರು 6,850 ಕೋಟಿ ರೂ.) ಮೊತ್ತದ ಇಂಧನವನ್ನು ಅಮೆರಿಕಕ್ಕೆ ರಫ್ತು ಮಾಡಿದೆ ಎಂದು ಯುರೋಪಿಯನ್ ಥಿಂಕ್ ಟ್ಯಾಂಕ್ ವರದಿ ತಿಳಿಸಿದೆ. ಉಕ್ರೇನ್ ಆಕ್ರಮಣದ ನಂತರ ರಷ್ಯಾದ ಮೇಲೆ ಪಾಶ್ಚಿಮಾತ್ಯ ರಾಷ್ಟಗಳು ಮತ್ತು ಯುಎಸ್ ನಿರ್ಬಂಧಗಳನ್ನು ವಿಧಿಸಿವೆ. ಆದರೆ ರಷ್ಯಾದ ಕಚ್ಚಾ ತೈಲವನ್ನು ಖರೀದಿಸುವುದು, ಬಳಸುವುದು ರಫ್ತು ಮಾಡುವುದನ್ನು ಇದರಡಿಯಲ್ಲಿ ನಿಷೇಧಿಸಲಾಗಿಲ್ಲ ಅಥವಾ ನಿರ್ಬಂಧಿಸಲಾಗಿಲ್ಲ.



# ತಮಿಳು ಭಾಷೆಗೆ ಪ್ರಾಶಸ್ತ್ಯ ನೀಡಿದ ರೈಲ್ವೆ ಇಲಾಖೆ

ಮಧುರೈ : ತಮಿಳುನಾಡಿನಲ್ಲಿ ಹಿಂದಿ ಭಾಷೆಯ ವಿರುದ್ಧ ತೀವ್ರ ಹೋರಾಟ ನಡೆಯುತ್ತಿದೆ. ಇದಕ್ಕೆ ಕೇಂದ್ರ ಸರ್ಕಾರ ತುಸು ಮಣಿದಂತಿದೆ. ಮಧುರೈ ವಿಭಾಗದ ರೈಲುಗಳಲ್ಲಿನ ಹವಾನಿಯಂತ್ರಿತ ಬೋಗಿಗಳಲ್ಲಿ ಪ್ರಯಾಣಿಕರಿಗೆ ನೀಡುವ ಹೊದಿಕೆಗಳ ಕವರ್‌ನಲ್ಲಿ ತಮಿಳು ಭಾಷೆಯಲ್ಲಿ ಮಾಹಿತಿಯನ್ನು




ಪ್ರಕಟಿಸಲು ಆದೇಶಿಸಿದೆ. ದೇಶಾದ್ಯಂತ ಎಲ್ಲಾ ವಿಭಾಗಗಳ ಅಡಿಯಲ್ಲಿ ಕಾರ್ಯನಿರ್ವಹಿಸುವ ರೈಲುಗಳಂತೆ, ಮಧುರೈ ವಿಭಾಗದ ಅಡಿ ಕಾರ್ಯನಿರ್ವಹಿಸುವ 13 ರೈಲುಗಳಲ್ಲಿ ಹವಾ ನಿಯಂತ್ರಿತ ಬೋಗಿಗಳಲ್ಲಿ ಪ್ರಯಾಣಿಸುವ ಪ್ರಯಾಣಿಕರ ಅನುಕೂಲಕ್ಕಾಗಿ ಹೊದಿಕೆಗಳನ್ನು ನೀಡಲಾಗುತ್ತದೆ.

# ಸಹಕಾರಕ್ಕೆ ಯಾವುದೇ ಮಿತಿಯಿಲ್ಲ – ತುಳಸಿ ಗಬ್ಬಾರ್ಡ್



ನವದೆಹಲಿ: ಭಾರತ ಮತ್ತು ಯುನೈಟೆಡ್ ಸ್ಟೇಟ್ಸ್ ನಡುವಿನ ಸಹಕಾರಕ್ಕೆ ಯಾವುದೇ ಮಿತಿಯಿಲ್ಲ ಎಂದು ಯುಎಸ್ ಗುಪ್ತಚರ ಇಲಾಖೆ ಮುಖ್ಯಸ್ಥೆ ತುಳಸಿ ಗಬ್ಬಾರ್ಡ್ ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಭೇಟಿಯನ್ನು ಉಲ್ಲೇಖಿಸಿ ಅವರು ಈ ಮಾತನ್ನು ಹೇಳಿದರು. "ಯುನೈಟೆಡ್ ಸ್ಟೇಟ್ಸ್ ಮತ್ತು ಭಾರತವು ಸಹಕರಿಸ ಬಯಸುವ ಕ್ಷೇತ್ರಗಳಿಗೆ ಯಾವುದೇ ಮಿತಿಗಳಿಲ್ಲ ಎಂದು ನಾನು ಭಾವಿಸುತ್ತೇನೆ, ಉಪಕ್ರಮವು ಉಭಯ ರಾಷ್ಟಗಳ ನಡುವಿನ ತಾಂತ್ರಿಕ ಸಂಬಂಧಗಳನ್ನು ಬಲಪಡಿಸುವ ಗುರಿಯನ್ನು ಹೊಂದಿದೆ." ಎಂದು ಭಾರತ ಪ್ರವಾಸದಲ್ಲಿರುವ ಗಬ್ಬಾರ್ಡ್ ಹೇಳಿದರು.

# ಮಹಾಲೇಖಪಾಲ: ಸುಪ್ರೀಂಕೋರ್ಟ್‌ನಿಂದ ಕೇಂದ್ರಕ್ಕೆ ನೋಟಿಸ್

ನವದೆಹಲಿ: ಕಾರ್ಯಾಂಗ ಮತ್ತು ಪ್ರಧಾನ ಮಂತ್ರಿಗಳು ಮಾತ್ರ ಸೇರಿಕೊಂಡು ಭಾರತದ ಮಹಾಲೇಖಪಾಲರನ್ನು ನೇಮಕ ಮಾಡುವ ಪ್ರಸ್ತುತ ಪದ್ಧತಿಯು ಅಸಾಂವಿಧಾನಿಕ ಎಂದು ಘೋಷಿಸಬೇಕೆಂದು ಕೋರಿ ಸಲ್ಲಿಸಲಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗೆ ಸಂಬಂಧಿಸಿದಂತೆ ಸರ್ವೋಚ್ಚ ನ್ಯಾಯಾಲಯವು ಕೇಂದ್ರ



ಸರಕಾರದ ಪ್ರತಿಕ್ರಿಯೆಯನ್ನು ಕೋರಿದೆ. ಸೆಂಟರ್ ಫಾರ್ ಪಬ್ಲಿಕ್ ಇಂಟರೆಸ್ಟ್ ಲಿಟಿಗೇಷನ್ ಹೆಸರಿನ ಎನ್‌ಜಿಒ ಸಲ್ಲಿಸಿದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯ ವಿಚಾರಣೆ ನಡೆಸಿದ ನ್ಯಾ.ಮೂ.ಗಳಾದ ಸೂರ್ಯಕಾಂತ್ ಮತ್ತು ಎನ್. ಕೋಟಿಶ್ವರ್ ಸಿಂಗ್ ಅವರ ಪೀಠವು ಕೇಂದ್ರ ಸರ್ಕಾರಕ್ಕೆ ನೋಟಿಸ್ ಜಾರಿಗೊಳಿಸಿದೆ.

# ಟನಲ್ ಕುಸಿದ ಸ್ಥಳದಲ್ಲಿ ಮುಂದುವರೆದ ರಕ್ಷಣಾ ಕಾರ್ಯಾಚರಣೆ

ತೆಲಂಗಾಣ : ತೆಲಂಗಾಣದ ಎಸ್‌ಎಲ್‌ಬಿಸಿ ಟನಲ್ ಕುಸಿದ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ಸಾಗಿದ್ದು, ನಾಪತ್ತೆಯಾದ 7 ಮಂದಿ ಕಾರ್ಮಿಕರಿಗೆ ಹುಡುಕಾಟ ತೀವ್ರಗೊಳಿಸಲಾಗಿದೆ. ಶ್ರೀಶೈಲಂ ಎಡದಂಡೆ ಕಾಲುವೆಯ ಟನಲ್‌ನ ಒಳ ಪ್ರದೇಶ ಭಾಗಶಃ ಕುಸಿದಿದ್ದು, ಡಿ1 ಮತ್ತು ಡಿ2 ಸ್ಥಳದಲ್ಲಿ ಕಣ್ಮರೆಯಾಗಿರುವ ವ್ಯಕ್ತಿಗಳಿರುವ ಸಾಧ್ಯತೆ ಇದೆ. ಇದಕ್ಕಾಗಿ ಮತ್ತಷ್ಟು ಸಿಬ್ಬಂದಿ ರಕ್ಷಣಾ ಕಾರ್ಯದಲ್ಲಿ ಭಾಗಿಯಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ದಕ್ಷಿಣ ಕೇಂದ್ರ ರೈಲ್ವೆ, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ರಾಜ್ಯದ ಗಣಿ ಸಿಂಗರೇಣಿ ಕಾಲೀರಿಸ್, RAT ಮೈನರ್ಸ್ ಹಾಗೂ ಇತರ ಸಿಬ್ಬಂದಿ ಶೋಧದಲ್ಲಿ ಭಾಗಿಯಾಗಿದ್ದಾರೆ.



# ಪೊಲೀಸರ ಮುಂದೆ ಒಂದೇ ದಿನ 64 ಮಂದಿ ನಕ್ಸಲರು ಶರಣು

ಹೈದರಾಬಾದ್ : ತೆಲಂಗಾಣದ ಭದ್ರಾದ್ರಿ ಕೊಥಗುಡೆಮ್ ಜಿಲ್ಲೆಯಲ್ಲಿ ಶನಿವಾರ ಬರೋಬ್ಬರಿ 60 ಜನ ನಕ್ಸಲರು ತಮ್ಮ ಶಸ್ತ್ರಾಸ್ತ್ರಗಳನ್ನು ತ್ಯಜಿಸಿ ಪೊಲೀಸರ ಮುಂದೆ ಶರಣಾದರು. ಕೊಥಗುಡೆಮ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್



ಜನರಲ್ ಸಮ್ಮುಖದಲ್ಲಿ ಈ ಸಾಮೂಹಿಕ ಶರಣಾಗತಿ ನಡೆದಿರುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಎಸ್‌ಪಿ ರೋಹಿತ್ ರಾಜು ಮತ್ತು ಭದ್ರಾಚಲಂ ಸ.ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ಹಿರಿಯ ಪೊಲೀಸ್ ಅಧಿಕಾರಿಗಳು ಶರಣಾಗತಿ ಕುರಿತು ಮಾಹಿತಿ ನೀಡಿದರು.



ಕರಾವಳಿ ತರಂಗಿಣಿ

# ಕಲಾ ತರಂಗಿಣಿ



## 'ವಾಮನ' ಏಪ್ರಿಲ್ 10ರಂದು ತೆರೆಗೆ

"ಆಕ್ಸಿನಾಕ್ಸ್ ಗ್ಲೋಬಲ್ ಎಂಟರ್ಟೈನ್ಮೆಂಟ್" ಬ್ಯಾನರ್ ಅಡಿಯಲ್ಲಿ ಚೇತನ್ ಗೌಡ ಅವರು ನಿರ್ಮಿಸಿರುವ, ಶಂಕರ್ ರಾಮನ್ ಎಸ್. ನಿರ್ದೇಶನದ ಹಾಗೂ ಧನ್ವೀರ್ ನಾಯಕರಾಗಿ ನಟಿಸಿರುವ "ವಾಮನ" ಚಿತ್ರಕ್ಕಾಗಿ ಪ್ರಮೋದ್ ಮರವಂತೆ ಬರೆದಿರುವ "ಕಂದ ಕನಸ ರೂಪ" ಎಂಬ ತಾಯಿ-ಮಗನ ಬಾಂಧವ್ಯದ ಕುರಿತಾದ ಹಾಡು ಇತ್ತೀಚೆಗೆ ಬಿಡುಗಡೆಯಾಯಿತು. ಚಾಲೆಂಜಿಂಗ್ ಸ್ಟಾರ್ ದರ್ಶನ್ ಅವರ ಧರ್ಮಪತ್ನಿ ವಿಜಯಲಕ್ಷ್ಮಿ ದರ್ಶನ್ ಅವರು ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದ್ದಾರೆ. "ಕಾಂತಾರ" ಖ್ಯಾತಿಯ ವೆಂಕಟೇಶ್ ಡಿ.ಸಿ ಈ ಹಾಡನ್ನು ಹಾಡಿದ್ದಾರೆ. ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ಈ ಹಾಡಿಗೆ ಅಭಿಮಾನಿಗಳು ಫಿದಾ ಆಗಿದ್ದಾರೆ. A2 music ಮೂಲಕ ಈ ಹಾಡು ಬಿಡುಗಡೆಯಾಗಿದೆ. ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಮ್ಮ ಸಂಸ್ಥೆಯಿಂದ ನಿರ್ಮಾಣವಾಗುತ್ತಿರುವ ಮೊದಲ ಚಿತ್ರವಿದು. ಈಗಾಗಲೇ ಚಿತ್ರದ ಮೂರು ಹಾಡುಗಳು ಬಿಡುಗಡೆಯಾಗಿದ್ದು, ತಾಯಿ-ಮಗನ ಬಾಂಧವ್ಯದ ಈ ಹಾಡು ಇಂದು ಬಿಡುಗಡೆಯಾಗಿದೆ. ಹಾಡು ಬಿಡುಗಡೆ ಮಾಡಿ ಕೊಟ್ಟ ವಿಜಯಲಕ್ಷ್ಮಿ ದರ್ಶನ್ ಅವರಿಗೆ ಧನ್ಯವಾದ. ಈಗಾಗಲೇ "ವಾಮನ" ಚಿತ್ರದ ಹಾಡುಗಳು ಜನರ ಮನ ತಲುಪಿದೆ. ನಾನು ಹೋದ ಕಡೆ ಎಲ್ಲಾ "ಮುದ್ದು ರಾಕ್ಷಸಿ" ಹಾಡಿನ ನಿರ್ಮಾಪಕರು ಎಂದೇ ಗುರುತಿಸುತ್ತಿದ್ದಾರೆ. ತಾಯಿ-ಮಗನ ಬಾಂಧವ್ಯದ ಈ ಹಾಡು ಸಹ ಎಲ್ಲರಿಗೂ ಮೆಚ್ಚುಗೆಯಾಗಲಿದೆ. ಸಂಗೀತ ಸಂಯೋಜಿಸಿರುವ "ಬಿ. ಅಜನೀಶ್ ಲೋಕನಾಥ್ ಅವರಿಗೆ ಹಾಗೂ ಮ್ಯೂಸಿಕ್ ಪಾರ್ಟ್ನರ್ "ಎಬಿ"ರವರಿಗೆ ಧನ್ಯವಾದ ತಿಳಿಸಿದರು. ಚಿತ್ರತಂಡದ ಸಹಕಾರದಿಂದ "ವಾಮನ" ಚಿತ್ರ ಚೆನ್ನಾಗಿ ಮೂಡಿಬಂದಿದೆ. ಏಪ್ರಿಲ್ 10ರಂದು ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ಮಾಪಕ ಚೇತನ್ ಗೌಡ. ಸಹ ನಿರ್ಮಾಪಕ ರೂಪ ಚೇತನ್ ಅವರು ಸಹ ಹಾಡು ಬಿಡುಗಡೆ ಮಾಡಿಕೊಟ್ಟ ವಿಜಯಲಕ್ಷ್ಮಿ ದರ್ಶನ್ ಅವರಿಗೆ ಹಾಗೂ ಚಿತ್ರತಂಡಕ್ಕೆ ಧನ್ಯವಾದ ಹೇಳಿದರು. ಮೊದಲಿಗೆ ಚಾಲೆಂಜಿಂಗ್ ಸ್ಟಾರ್ ದರ್ಶನ್ ಹಾಗೂ ವಿಜಯಲಕ್ಷ್ಮಿ ದರ್ಶನ್ ಅವರಿಗೆ ಧನ್ಯವಾದ ತಿಳಿಸಿ ಮಾತನಾಡಿದ ನಾಯಕ ಧನ್ವೀರ್, ಇದು ನನ್ನ ಅಭಿನಯದ ನಾಲ್ಕನೇ ಚಿತ್ರ. ನನ್ನ ಮೊದಲ ಚಿತ್ರದಿಂದಲೂ ಎಲ್ಲರೂ ನೀಡುತ್ತಿರುವ ಪ್ರೋತ್ಸಾಹಕ್ಕೆ ನಾನು ಚಿರ ಋಣಿ. "ವಾಮನ" ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ. ಪ್ರಮೋದ್ ಮರವಂತೆ ಅವರು ಬರೆದಿರುವ ಅಮ್ಮ-ಮಗನ ಬಾಂಧವ್ಯದ ಈ ಹಾಡು ಎಲ್ಲರ ಪ್ರಶಂಸೆಗೆ ಪಾತ್ರವಾಗಲಿದೆ ಎಂದರು.



## ಬಹುಭಾಷಾ ಚಿತ್ರಗಳಲ್ಲಿ 'ಕೆಜಿಎಫ್' ಅವಿನಾಶ್ ನಟನೆ

ಮುಂದೊಂದು ದಿನ ನಟನಾಗಬಹುದು, ಬಹುಭಾಷೆಯ ಚಿತ್ರಗಳಲ್ಲಿ ನಟಿಸಬಹುದು ಎಂದು ಕನಸನ್ನೂ ಕಂಡಿರದ ಅವಿನಾಶ್ ಇವತ್ತು ಕನ್ನಡವಲ್ಲದೆ, ತೆಲುಗು, ತಮಿಳು, ಹಿಂದಿ ಮತ್ತು ಮಲಯಾಳಂ ಭಾಷೆಗಳಲ್ಲಿ ಬೇಡಿಕೆಯ ನಟರಾಗಿದ್ದಾರೆ. ಕಡಿಮೆ ಸಮಯದಲ್ಲಿ ಬೇರೆ ಭಾಷೆಯ ಜನಪ್ರಿಯ ನಟರೊಂದಿಗೆ ತೆರೆ ಹಂಚಿಕೊಂಡು ಛಾಪು ಮೂಡಿಸಿದ್ದಾರೆ. ಇವರು ಯಾವ ಅವಿನಾಶ್ ಎಂಬ ಪ್ರಶ್ನೆ ಬರಬಹುದು. 'ಕೆಜಿಎಫ್' ಚಿತ್ರದ ಮೂಲಕ ಚಿತ್ರರಂಗಕ್ಕೆ ಪರಿಚಿತರಾಗಿ, ಆ ನಂತರ ಹಲವು ಚಿತ್ರಗಳಲ್ಲಿ ನಟಿಸುತ್ತಿರುವ ನಟನ ಕಥೆ ಇದು. ನೀವು 'ಕೆಜಿಎಫ್' ಚಿತ್ರಗಳನ್ನು ನೋಡಿದ್ದರೆ, ಅದರಲ್ಲಿ ಆಂಡ್ರ್ಯೂ ಪಾತ್ರ ಖಂಡಿತಾ ಗಮನ ಸೆಳೆದಿರುತ್ತದೆ. ಆ ಪಾತ್ರ ಮಾಡಿದವರು ಅದೇ ಅವಿನಾಶ್. ಮೂಲತಃ ಬೆಂಗಳೂರಿನವರಾದ ಅವಿನಾಶ್, ಬೇರೆ ಉದ್ಯಮದಲ್ಲಿ ತೊಡಗಿಸಿಕೊಂಡವರು. ನಟಿಸಬೇಕು ಎಂಬ ಆಸೆ ಇದ್ದಿದ್ದು ಬಿಟ್ಟರೆ, ಯಾವತ್ತೂ ಯಾವ ಸ್ಟೇಜ್ ಹತ್ತಿರಲಿಲ್ಲ. ಚಿರಂಜೀವಿ ಸರ್ಜಾ ಸ್ನೇಹ ಬಿಟ್ಟರೆ, ಚಿತ್ರರಂಗದವರ ಪರಿಚಯವೂ ಇರಲಿಲ್ಲ. ಒಮ್ಮೆ ತಮ್ಮ ಆಸೆಯನ್ನು ಚಿರು ಬಳಿ ಹೇಳಿಕೊಂಡಾಗ, ಅವರು ಪನ್ನಗಾಭರಣರನ್ನು ಪರಿಚಯ ಮಾಡಿಸಿದರಂತೆ. ಪನ್ನಗ, ಛಾಯಾಗ್ರಾಹಕ ಭುವನ್ ಗೌಡ ಅವರನ್ನು ಪರಿಚಯಿಸಿದ್ದಾರೆ. ಆಗ 'ಕೆಜಿಎಫ್' ಚಿತ್ರದ ಕೆಲಸದಲ್ಲಿ ತೊಡಗಿಸಿಕೊಂಡಿದ್ದ ಭುವನ್, ಅವಿನಾಶ್ ಅವರನ್ನು ನಿರ್ದೇಶಕ ಪ್ರಶಾಂತ್ ನೀಲ್‌ಗೆ ಭೇಟಿ ಮಾಡಿಸಿದ್ದಾರೆ. ತಮ್ಮ ಚಿತ್ರಕ್ಕೆ ಸೂಕ್ತ ಪಾತ್ರಧಾರಿಗಳ ಹುಡುಕಾಟದಲ್ಲಿದ್ದ ಪ್ರಶಾಂತ್, ಒಂದು ಪಾತ್ರಕ್ಕೆ ಅವಿನಾಶ್ ಅವರನ್ನು ಆಯ್ಕೆ ಮಾಡಿದ್ದಾರೆ. ಪಾತ್ರವೇನೋ ಸಿಕ್ಕಿದೆ. ಆದರೆ, ಅವಿನಾಶ್ ಅವರಿಗೆ ನಟನೆ ಗೊತ್ತಿಲ್ಲ. ಕ್ಯಾಮೆರಾ ಹೇಗೆ ಎದುರಿಸಬೇಕು ಎಂದು ತಿಳಿದಿಲ್ಲ. ಸುಮಾರು ಒಂದು ವರ್ಷ ಪ್ರಶಾಂತ್ ನೀಲ್, ಕಾರ್ಯಾಗಾರ ಮಾಡಿ ಅವಿನಾಶ್ ಅವರನ್ನು ತಿದ್ದಿ-ತೀಡಿ ಕ್ಯಾಮೆರಾ ಮುಂದೆ ನಿಲ್ಲಿಸಿದ್ದಾರೆ. ಅದಕ್ಕೆ ಪ್ರತಿಯಾಗಿ ತಮ್ಮ ಪಾತ್ರವನ್ನು ಅಚ್ಚುಕಟ್ಟಾಗಿ ನಿರ್ವಹಿಸಿದ ಅವಿನಾಶ್ ಮೊದಲ ಚಿತ್ರದಲ್ಲೇ ಗಮನಸೆಳೆದಿದ್ದಾರೆ. 'ಕೆಜಿಎಫ್ 1' ಮತ್ತು 'ಕೆಜಿಎಫ್ 2' ಚಿತ್ರಗಳ ಜೊತೆಗೆ 'ಗುರುದೇವ್ ಹೊಯ್ಸಳ' ಚಿತ್ರದಲ್ಲೂ ತಮ್ಮ ಅಭಿನಯದ ಮೂಲಕ ಗಮನಸೆಳೆದಿದ್ದಾರೆ. ಕನ್ನಡವಲ್ಲದೆ, ತೆಲುಗಿನ 'ವೀರ ಸಿಂಹ ರೆಡ್ಡಿ', 'ವಾಲ್ತೇರ್ ವೀರಯ್ಯ', ತಮಿಳಿನ 'ವೆಟ್ಟಯಾನ್', 'ಕಂಗುವಾ', 'ಕಾದರ್ ಭಾಷ ಎಂದ್ರ ಮುತ್ತುರಾಮಲಿಂಗಂ', ಮಲಯಾಳಂನ 'ಒರು ಪೆರುಂ ಕಲಿಯಾಟ್ಟಂ', ಹಿಂದಿಯ 'ಬೇಬಿ ಜಾನ್' ಚಿತ್ರಗಳಲ್ಲಿ ಈಗಾಗಲೇ ನಟಿಸಿರುವ ಅವಿನಾಶ್, ಮುಂಬರುವ ವಿಜಯ್ ಸೇತುಪತಿ ಅಭಿನಯದ "ಏಸ್", 'ಗುಡ್ ಬ್ಯಾಡ್ ಅಗ್ಲಿ', 'ಕಿಂಗ್ಡಮ್', 'ಬುಲೆಟ್', 'ನಾಗಬಂಧಂ' ಮುಂತಾದ ಚಿತ್ರಗಳಲ್ಲಿ ಅಭಿನಯಿಸಿದ್ದು, ಆ ಚಿತ್ರಗಳ ಬಿಡುಗಡೆಗೆ ಕಾಯುತ್ತಿದ್ದಾರೆ. ಒಳ್ಳೆಯ ಪೋಷಕ ನಟನಾಗಿ ಗುರುತಿಸಿಕೊಳ್ಳುವ ಆಸೆ. 'ಒಳ್ಳೆಯ ವಿಲನ್ ಪಾತ್ರಗಳು, ಅರ್ಥಪೂರ್ಣ ಪೋಷಕ ಪಾತ್ರಗಳಿಗೆ ಎದುರು ನೋಡುತ್ತಿದ್ದೇನೆ. ಅಭಿನಯಕ್ಕೆ ಪ್ರಾಮುಖ್ಯತೆ ಇರಬೇಕು. 'ಗುರುದೇವ್ ಹೊಯ್ಸಳ' ಚಿತ್ರದಲ್ಲೊಂದು ಒಳ್ಳೆಯ ಪಾತ್ರ ಸಿಕ್ಕಿತ್ತು ಎಂದರು.



## ಬೆಂಗಳೂರಿನಲ್ಲಿ 'ಕಿಸ್ ಕಿಸ್ ಕಿಸ್ಸಿಕ್' ಸಿನಿಮಾ ಪ್ರಚಾರ ಮಾಡಿದ ಗಣೇಶ್ ಆಚಾರ್ಯ

ಭಾರತೀಯ ಚಿತ್ರರಂಗದ ಖ್ಯಾತ ನೃತ್ಯ ಸಂಯೋಜಕ ಗಣೇಶ್ ಆಚಾರ್ಯ ಬೆಂಗಳೂರಿನಲ್ಲಿ ಪ್ರತ್ಯಕ್ಷರಾಗಿದ್ದಾರೆ. ಸಾಕಷ್ಟು ಕನ್ನಡ ಚಿತ್ರಗಳಿಗೂ ಕೊರಿಯೋಗ್ರಫರ್ ಆಗಿ ಕೆಲಸ ಮಾಡಿರುವ ಗಣೇಶ್ ಆಚಾರ್ಯ ಈ ಬಾರಿ ತಮ್ಮ ನಿರ್ಮಾಣದ ಸಿನಿಮಾ ಪ್ರಚಾರಕ್ಕೆ ಬೆಂಗಳೂರಿಗೆ ಆಗಮಿಸಿದ್ದರು. ನಿನ್ನೆ ನಗರದ ವೈಷ್ಣವಿ ಸಫೈರ್ ಮಾಲ್‌ನಲ್ಲಿ ಗಣೇಶ್ ಆಚಾರ್ಯ ನಿರ್ಮಾಣದ ಕಿಸ್ ಕಿಸ್ ಕಿಸ್ಸಿಕ್ ಸುದ್ದಿಗೋಷ್ಠಿ ಆಯೋಜಿಸಲಾಗಿತ್ತು. ಈ ವೇಳೆ ಇಡೀ ತಂಡ ಭಾಗಿಯಾಗಿತ್ತು. ಇದೇ ಸಂದರ್ಭದಲ್ಲಿ ಮಾತನಾಡಿದ ಗಣೇಶ್ ಆಚಾರ್ಯ, ನಾನು ದಕ್ಷಿಣದವನು. ನಾನು ದಕ್ಷಿಣ ಭಾರತದ ಎಲ್ಲಾ ಭಾಷೆಯನ್ನು ಇಷ್ಟಪಡುತ್ತೇನೆ. ನಾನು ಕನ್ನಡದ ಸಾಕಷ್ಟು ಚಿತ್ರಗಳಿಗೆ ನೃತ್ಯ ಸಂಯೋಜಿಸಿದ್ದೇನೆ. ದರ್ಶನ್, ಕಿಚ್ಚ, ಯಶ್ ಚಿತ್ರಗಳಿಗೆ ಕೆಲಸ ಮಾಡಿದ್ದೇನೆ. ನಾನು ಬಾಲಿವುಡ್ ಕೊರಿಯೋಗ್ರಫರ್ ಅಥವಾ ಸೌತ್ ಇಂಡಿಯಾ ಕೊರಿಯೋಗ್ರಫರ್ ಅನಿಸುತ್ತದೆ. ಯಾಕೆಂದರೆ ಹೆಚ್ಚಾಗಿ ದಕ್ಷಿಣ ಭಾರತದ ಚಿತ್ರಗಳಿಗೆ ಕೆಲಸ ಮಾಡಿದ್ದೇನೆ. ಕಿಸ್‌ಕಿಸ್ ಕಿಸ್ಸಿಕ್ ಇದು ಬೆಸ್ಟ್ ಟೈಟಲ್ ಎನಿಸಿತು. ಮಾರ್ಚ್ 21ಕ್ಕೆ ನಮ್ ಚಿತ್ರ ಕನ್ನಡ, ಹಿಂದಿ, ಮಲಯಾಳಂ ಸೇರಿದಂತೆ ಎಲ್ಲಾ ಭಾಷೆಯಲ್ಲಿ ಬಿಡುಗಡೆಯಾಗುತ್ತಿದೆ. ಈ ಹೊಸ ಪ್ರತಿಭೆಗಳಿಗೆ ನಿಮ್ಮ ಬೆಂಬಲ ಇರಲಿ ಎಂದು ತಿಳಿಸಿದರು. ಖ್ಯಾತ ನೃತ್ಯ ಸಂಯೋಜಕ ಗಣೇಶ್ ಆಚಾರ್ಯ ಪತ್ನಿ ವಿಧಿ ಆಚಾರ್ಯ ತಮ್ಮದೇ V2S Production ನಡಿ ಪಿಂಟು ಕಿ ಪಪ್ಪಿ ಎಂಬ ಚಿತ್ರ ನಿರ್ಮಾಣ ಮಾಡಿದ್ದಾರೆ. ಕಾಮಿಡಿ, ರೋಮ್ಯಾನ್ಸ್, ಆಕ್ಷನ್ ಅಂಶಗಳನ್ನೊಳಗೊಂಡಿರುವ ಈ ಸಿನಿಮಾ 'ಕಿಸ್‌ಕಿಸ್ ಕಿಸ್ಸಿಕ್' ಎಂಬ ಟೈಟಲ್ ನಡಿ ತೆಲುಗು, ಹಿಂದಿ, ಕನ್ನಡ ಹಾಗೂ ಮಲಯಾಳಂ ಭಾಷೆಯಲ್ಲಿ ಮಾರ್ಚ್ 21ಕ್ಕೆ ಬಿಡುಗಡೆಯಾಗುತ್ತಿದೆ. 'ಕಿಸ್ ಕಿಸ್ ಕಿಸ್ಸಿಕ್' ಚಿತ್ರವನ್ನು ದಕ್ಷಿಣದಲ್ಲಿ ಮೈತ್ರಿ ಮೂವೀ ಮೇಕರ್ಸ್ ವಿತರಣೆ ಮಾಡುತ್ತಿದೆ. 'ಕಿಸ್ ಕಿಸ್ ಕಿಸ್ಸಿಕ್' ವಿತರಣ ಹಕ್ಕನ್ನು ಮೈತ್ರಿ ಮೂವೀ ಮೇಕರ್ಸ್ ತನ್ನದಾಗಿಸಿಕೊಂಡಿದೆ.



## ನೂತನ ಪ್ರತಿಭೆಗಳ ಸಮಾಗಮದಲ್ಲಿ 'ಉಜ್ಜಯಿನಿ ಮಹಾಕಾಲ'

ದ್ವಾದಶ ಜ್ಯೋತಿರ್ಲಿಂಗಗಳಲ್ಲಿ "ಉಜ್ಜಯಿನಿ ಮಹಾಕಾಲ" ಕೂಡ ಒಂದು. ಈಗ ಅದೇ ಶೀರ್ಷಿಕೆಯಲ್ಲಿ ಕನ್ನಡ ಚಿತ್ರವೊಂದು ನಿರ್ಮಾಣವಾಗುತ್ತಿದೆ. ಹರಿಪ್ರಸಾದ್ ಎಂ ಮಂಡ್ಯ ನಿರ್ಮಾಣ-ನಿರ್ದೇಶನದಲ್ಲಿ ವಿನಯ್ ನಾಯಕನಾಗಿ ನಟಿಸುತ್ತಿರುವ "ಉಜ್ಜಯಿನಿ ಮಹಕಾಲ" ಪೌರಾಣಿಕ ಚಿತ್ರವಲ್ಲ. ಹೊಸತಂಡದ ಸಮಾಗಮದಲ್ಲಿ ಮೂಡಿಬರುತ್ತಿರುವ ಈ ಚಿತ್ರದ ಶೀರ್ಷಿಕೆಯನ್ನು ಇತ್ತೀಚೆಗೆ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಎಂ.ನರಸಿಂಹಲು ಬಿಡುಗಡೆ ಮಾಡಿದರು. ನಿರ್ಮಾಪಕ ನಾಗೇಶ್ ಕುಮಾರ್, ನಿರ್ದೇಶಕ ಜೆ.ಜಿ.ಶ್ರೀನಿವಾಸ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಗಣ್ಯರು ಚಿತ್ರಕ್ಕೆ ಶುಭ ಕೋರಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಮೂಲತಃ ಮಂಡ್ಯದವನು. ಹದಿನೈದು ವರ್ಷಗಳಿಂದ ಚಿತ್ರರಂಗದೊಂದಿಗೆ ನಂಟು. ಆದರೆ ಸ್ವತಂತ್ರ ನಿರ್ದೇಶಕನಾಗಿ ಇದು ಮೊದಲ ಚಿತ್ರ. ಈ ಚಿತ್ರದ ಚಿತ್ರೀಕರಣ ಆರಂಭವಾಗಿ ಒಂದು ತಿಂಗಳಾಗಿದೆ. ಅರ್ಧದಷ್ಟು ಚಿತ್ರೀಕರಣ ಮುಗಿದಿದೆ. ಈಗ ಶೀರ್ಷಿಕೆ ಅಂತಿಮವಾಗಿದೆ. ನಮ್ಮ ಚಿತ್ರಕ್ಕೆ "ಉಜ್ಜಯಿನಿ ಮಹಾಕಾಲ" ಎಂದು ಹೆಸರಿಡಲಾಗಿದೆ. ಹಾಗಂತ ಈ ಚಿತ್ರ ಪೌರಾಣಿಕ ಚಿತ್ರವಲ್ಲ. ಸಸ್ಪೆನ್ಸ್ ಥ್ರಿಲ್ಲರ್ ಕಥಾಹಂದರ ಹೊಂದಿರುವ ಚಿತ್ರ. "ಉಜ್ಜಯಿನಿ ಮಹಾಕಾಲ" ಎಂದು ಶೀರ್ಷಿಕೆಯಿಡಲು ಕಾರಣವಿದೆ. ಶೀರ್ಷಿಕೆಗೂ ಚಿತ್ರಕ್ಕೂ ಸಂಬಂಧವಿದೆ. ಮುಂದಿನ ಹಂತದಲ್ಲಿ ಉಜ್ಜಯಿನಿಯಲ್ಲೂ ಚಿತ್ರೀಕರಣ ನಡೆಯಲಿದೆ. ಈಗ ಮೈಸೂರು ಸುತ್ತಮುತ್ತ ಚಿತ್ರೀಕರಣ ನಡೆದಿದೆ. ಇನ್ನೂ ಎಲ್ಲರ ಜೀವನದಲ್ಲೂ ಮಹಾಕಾಲ ಅಂತ ಒಂದು ಬರುತ್ತದೆ. ಅದು ನಮ್ಮ ನಾಯಕನ ಜೀವನದಲ್ಲೂ ಬಂದಾಗ ಏನಾಗಬಹುದು ? ಎಂಬುದನ್ನು ಸಹ ತೋರಿಸುತ್ತಿದ್ದೇವೆ. ನಾನೇ ಚಿತ್ರಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ಮಾಣ ಹಾಗೂ ನಿರ್ದೇಶನ ಮಾಡುತ್ತಿದ್ದೇನೆ. ನಿರ್ಮಾಣಕ್ಕೆ ರತ್ನಾಕರ್ ಹಾಗೂ ಮೋಹನ್ ಅವರು ಸಾಥ್ ನೀಡಿದ್ದಾರೆ ಎಂದು ನಿರ್ಮಾಪಕ ಹಾಗೂ ನಿರ್ದೇಶಕ ಹರಿಪ್ರಸಾದ್ ಎಂ.ಬಿ ಮಂಡ್ಯ ಮಾಹಿತಿ ನೀಡಿದರು. ಈ ಹಿಂದೆ ಸಹ ಕಲಾವಿದನಾಗಿ ಅಭಿನಯಿಸುತ್ತಿದ್ದೆ. ನಾಯಕ ನಾಗಿ ಇದು ಮೊದಲ ಚಿತ್ರ. ನಾನು ಈ ಚಿತ್ರದಲ್ಲಿ ಅನಾಥ. ಸೂರ್ಯ ನನ್ನ ಪಾತ್ರದ ಹೆಸರು ಎಂದರು ನಾಯಕ ವಿನಯ್. ರಘು ಅರೂಗಿ ಛಾಯಾಗ್ರಹಣ, ಕಲ್ಕಿ ಅಭಿಷೇಕ್ ಸಂಗೀತ ನಿರ್ದೇಶನ ಹಾಗೂ ಗಣಿ ಲಚ್ಚು & ರಘು ಅರೂಗಿ ಅವರ ಸಂಕಲನ "ಉಜ್ಜಯಿನಿ ಮಹಾಕಾಲ" ಚಿತ್ರಕ್ಕಿದೆ.

## ಚಂದನ್ ಶೆಟ್ಟಿ 'ಸೂತ್ರಧಾರಿ'

ಚಿತ್ರದ ಪ್ರಮುಖ ಪಾತ್ರಧಾರಿ. ಈಗಲ್ ಮೀಡಿಯಾ ಕ್ರಿಯೇಷನ್ಸ್ ಮೂಲಕ ಚಿತ್ರರಂಗದ ಸಾಕಷ್ಟು ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವ ನವರಸನ್ ನಿರ್ಮಾಣದ, ಕಿರಣ್ ಕುಮಾರ್ ಚೊಚ್ಚಲ ನಿರ್ದೇಶನದ ಹಾಗೂ ತಮ್ಮ ಗಾಯನದ ಮೂಲಕ ಜನಪ್ರಿಯರಾಗಿರುವ ಚಂದನ್ ಶೆಟ್ಟಿ ಮೊದಲ ಬಾರಿಗೆ ನಾಯಕನಾಗಿ ನಟಿಸಿರುವ "ಸೂತ್ರಧಾರಿ" ಚಿತ್ರ ಮೇ 9ರಂದು ಅದ್ದೂರಿಯಾಗಿ ಬಿಡುಗಡೆಯಾಗಲಿದೆ. ನಿರ್ಮಾಪಕರಾದ ಚೇತನ್ ಗೌಡ, ಮುನೇಗೌಡ ಹಾಗೂ ರಾಜೇಶ್ ಅವರು "ಸೂತ್ರಧಾರಿ" ಚಿತ್ರದ ಬಿಡುಗಡೆ ದಿನಾಂಕ ಅನಾವರಣ ಮಾಡಿ, ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನಾನು ಚಿತ್ರರಂಗಕ್ಕೆ ಬಂದಾಗಿನಿಂದಲೂ ನೀವು ನೀಡುತ್ತಿರುವ ಪ್ರೋತ್ಸಾಹಕ್ಕೆ ಚಿರಋಣಿ ಎಂದು ಮಾತನಾಡಿದ ನಿರ್ಮಾಪಕ ನವರಸನ್, ನಾನು ನಿರ್ಮಾಪಕ ಮತ್ತು ನಿರ್ದೇಶಕ ಮಾತ್ರ ಅಲ್ಲ. ವಿತರಕ ಕೂಡ. ಸುಮಾರು 200 ಚಿತ್ರಗಳನ್ನು ವಿತರಣೆ ಮಾಡಿದ್ದೇನೆ. ಕಳೆದ ವರ್ಷದಿಂದ ಇಲ್ಲಿಯವರೆಗೆ ವಾರಕ್ಕೆ ಹತ್ತರಂತೆ ಸಿನಿಮಾಗಳು ಬಿಡುಗಡೆಯಾಗುತ್ತಿದೆ. ಹಾಗಾಗಿ ನಾನು ಈ ಸಮಯದಲ್ಲಿ ನನ್ನ ಚಿತ್ರವನ್ನು ಬಿಡುಗಡೆ ಮಾಡಲಿಲ್ಲ. ಈಗ 40 ದಿನಗಳ ಮುಂಚೆ ಚಿತ್ರದ ದಿನಾಂಕ ಘೋಷಣೆ ಮಾಡುತ್ತಿದ್ದೇನೆ. ಮೇ9ರಂದು ನಮ್ಮ ಚಿತ್ರ ಅದ್ದೂರಿಯಾಗಿ ಬಿಡುಗಡೆಯಾಗುತ್ತಿದೆ. ಚಿತ್ರತಂಡದ ಸಹಕಾರದಿಂದ ಚಿತ್ರ ಉತ್ತಮವಾಗಿ ಮೂಡಿಬಂದಿದೆ ಎಂದರು.



## ತೆರೆಗೆ ಬರ್ಗೆಟ್ ಬಸ್ಯಾ

ಹೊಸಬರ 'ಬರ್ಗೆಟ್ ಬಸ್ಯಾ' ಚಿತ್ರದ ಟೀಸರ್ ಮತ್ತು ಟ್ರೇಲರ್ ಬಿಡುಗಡೆಯಾಗಿ ಎಲ್ಲಾ ಕಡೆಗಳಲ್ಲೂ ಪ್ರಶಂಸೆ ವ್ಯಕ್ತವಾಗಿದೆ. ಯರ್ರಂರೆಡ್ಡಿ ಪಿಕ್ಚರ್ಸ್ ಸಂಸ್ಥೆ ಅಡಿಯಲ್ಲಿ ಬಳ್ಳಾರಿಯ ವೈ.ನಾಗಾರ್ಜುನರೆಡ್ಡಿ ಬಂಡವಾಳ ಹೂಡಿದ್ದಾರೆ. ಮಲ್ಲಿಕಾರ್ಜುನ್.ಕೆ ನಿರ್ಮಾಣದಲ್ಲಿ ಕೈ ಜೋಡಿಸಿದ್ದಾರೆ. 'ಕಂಡ್ ಕಂಡ್ ಹುಡ್ಗ ಹುಡ್ಗೀರ್ಗೆಲ್ಲ ...?' ಎಂಬ ಅಡಿಬರಹವಿದೆ. ರಿಶ್‌ಹಿರೇಮಠ್ ನಿರ್ದೇಶನ ಮಾಡುವ ಜತೆಗೆ ನಾಯಕನಾಗಿ ಅಭಿನಯಿಸಿದ್ದಾರೆ. ನೋಡಿದಂತ ಸೀನ್‌ಗಳು ನಿಜ ಜೀವನದಲ್ಲಿ ನಡೆಯುತ್ತಿದೆ. ನಿಮ್ಮೊಳಗಡೆ ಇನ್ನೊಬ್ಬ ಪಾತ್ರಧಾರಿ ಇರುತ್ತಾನೆ. ಹುಡುಗಿರನ್ನು ನೋಡಿದಾಗ ಪಾತ್ರದಿಂದ ಹೊರಗೆ ಬರುತ್ತಾನೆ. ಯಾರೂ ಹೇಳಿಕೊಳ್ಳದೆ ಇರುವುದನ್ನು ಸಿನಿಮಾದಲ್ಲಿ ತೋರಿಸುವ ಪ್ರಯತ್ನ ಮಾಡಲಾಗಿದೆ. 55 ಹುಡುಗಿರು ಕೆಲವೇ ನಿಮಷದಲ್ಲಿ ಬಂದರೂ ನಾಯಕಿಯರಂತೆ ಬಿಂಬಿಸಲಾಗಿದೆ. ಚಿತ್ರೀಕರಣವು ಬೆಂಗಳೂರು, ತೀರ್ಥಹಳ್ಳಿ, ಕೊಪ್ಪ ನಡೆಸಿ, ಬೆನಗನಹಳ್ಳಿಯ ಸುಂದರ ತಾಣದಲ್ಲಿ ನಡೆದಿದೆ. ಪ್ರಕಾಶ್.ಜಿ ಸಾಹಿತ್ಯಕ್ಕೆ ಸಿದ್ದಾರ್ಥ್ ಕಾಮತ್ ಸಂಗೀತ ಸಂಯೋಜಿಸಿದ್ದಾರೆ. ಛಾಯಾಗ್ರಹಣ ಶಾಮ್‌ಸಾಲ್ವಿನ್, ಸಂಕಲನ ಸಿದ್ದು ದಳವಾಯಿ ಅವರದಾಗಿದೆ. ಮಾರ್ಚ್ 3ನೇ ವಾರದಲ್ಲಿ ತೆರೆ ಕಾಣುತ್ತಿದೆ.



## ಕಲ್ಕಿ ಅವತಾರದಲ್ಲಿ ಅರಿಂದಮ್

ತನ್ನ ವಯಸಿಗೆ ಮೀರಿದಂಥ ನಡವಳಿಕೆ, ಬುದ್ದಿಶಕ್ತಿ ಹೊಂದಿದ ಯುವಕನೋರ್ವನ ಜೀವನದಲ್ಲಿ ದುಷ್ಟಶಕ್ತಿಗಳ ವಿರುದ್ದ ನಡೆಯುವ ಹೋರಾಟ ಹಾಗೂ ಪ್ರೀತಿ, ಪ್ರೇಮದ ಸುತ್ತ ನಡೆಯುವ ಘಟನೆಗಳೇ ಅರಿಂದಮ್. ಕಲ್ಕಿ ಅಗಸ್ತ್ಯ ಕಥೆ, ಚಿತ್ರಕಥೆ ಬರೆದು ನಿರ್ದೇಶನ ಮಾಡಿರುವ ಈ ಚಿತ್ರದ ಎರಡು ಲಿರಿಕಲ್ ಹಾಡುಗಳ ಬಿಡುಗಡೆ ಹಾಗೂ ಪತ್ರಿಕಾಗೋಷ್ಠಿ ಕಾರ್ಯಕ್ರಮ ಇತ್ತೀಚೆಗೆ ನಡೆಯಿತು. ಚಿತ್ರದಲ್ಲಿ ನಾಯಕನಾಗೂ ಕಾಣಿಸಿಕೊಂಡಿರುವ ಕಲ್ಕಿ ಅಗಸ್ತ್ಯ ಮಾತನಾಡುತ್ತ ನಾನು ಮೂಲತಃ ಧಾರವಾಡದವನು. ಉತ್ಸಾಹಿ ಯುವಕರೆಲ್ಲ ಸೇರಿ ಒಂದು ಸದಭಿರುಚಿಯ ಸಿನಿಮಾ ಮಾಡಿದ್ದೇವೆ. ಕಾಳಿ ಎಂಬ ಯುವಕನ ಜೀವನದ ಏಳು ಬೀಳುಗಳು, ಪ್ರೀತಿ ಪ್ರೇಮದ ಕಥೆಯನ್ನು ಈ ಚಿತ್ರದ ಮೂಲಕ ಹೇಳಲು ಪ್ರಯತ್ನಿಸಿದ್ದೇವೆ. ಇದು 2008ರಲ್ಲಿ ನಡೆಯುವ ಕಥೆ. ಅರಿ ಅಂದ್ರೆ ಶತ್ರು ದಮ್ ಅಂದ್ರೆ ನಾಶ ಮಾಡುವವನು ಶಿವ, ವಿಷ್ಣುವಿನ ಪ್ರತಿರೂಪ ಎಂದರ್ಥ. ಕಾಳಿ 20 ವರ್ಷದವನಾದರೂ 40 ವರ್ಷದ ವ್ಯಕ್ತಿಯಂತೆ ವರ್ತಿಸುತ್ತಾನೆ. ಆತ ಕಡಿಮೆ ಮಾತಾಡ್ತಾನೆ, ಆದರೆ ಒಂದು ಮಾತಾಡಿದರೂ ಅದರಲ್ಲಿ ಹತ್ತು ಮಾತಿನ ತೂಕವಿರುತ್ತೆ. ಚಿಕ್ಕ ವಯಸಿನಲ್ಲೇ ತಾಯಿಯನ್ನು ಕಳೆದುಕೊಂಡ ಕಾಳಿ ತನ್ನವರು ಎನಿಸಿಕೊಂಡವರ ರಕ್ಷಣೆಗೆ ನಿಂತಾಗ ಆತನ ವಿರುದ್ದ ಒಂದು ಚಕ್ರವ್ಯೂಹವೇ ಸೃಷ್ಟಿಯಾಗುತ್ತೆ. ನಂತರ ಅದರಿಂದ ಆತ ಹೇಗೆ ಹೊರಬರುತ್ತಾನೆ ಎಂಬುದನ್ನು ಅರಿಂದಮ್ ಚಿತ್ರದ ಮೂಲಕ ಹೇಳ ಹೊರಟಿದ್ದೇನೆ ಎಂದರು.



## ಅಣ್ಣಾವ್ರ ಜನ್ಮದಿನಕ್ಕೆ ಮೊಮ್ಮಗಳ ಗಿಫ್ಟ್

ಸೆಂಚುರಿ ಸ್ಟಾರ್ ಶಿವರಾಜ್ ಕುಮಾರ್ ಅವರ ಪುತ್ರಿ ನಿವೇದಿತಾ ಶಿವರಾಜ್‌ಕುಮಾರ್ ಒಡೆತನದ 'ಶ್ರೀ ಮುತ್ತು ಸಿನಿ ಸರ್ವೀಸಸ್ ಆಂಡ್ ಪ್ರೊಡಕ್ಷನ್ಸ್' ಬ್ಯಾನರ್ ನಿರ್ಮಾಣದ ಚೊಚ್ಚಲ ಚಲನಚಿತ್ರ "ಫೈರ್ ಫ್ಲೈ". ಈಗಾಗಲೇ ಟೀಸರ್ ಮೂಲಕ ಜನರ ಮನಸನ್ನು ಗೆದ್ದಿರುವ ಈ ಚಿತ್ರವು ಏಪ್ರಿಲ್ 24, ವರನಟ ಡಾ. ರಾಜಕುಮಾರ್ ಅವರ ಜನ್ಮದಿನದಂದು ತೆರೆ ಮೇಲೆ ಬರುತ್ತಿದೆ. 'ಫೈರ್ ಫ್ಲೈ' ಚಿತ್ರದಲ್ಲಿ ವಂಶಿ ಹೀರೋ ಆಗಿ ನಟಿಸಿದ್ದಾರೆ. ನಿರ್ದೇಶನದ ಜವಾಬ್ದಾರಿ ಕೂಡ ಅವರದ್ದೇ ಎಂಬುದು ವಿಶೇಷ. ಆಚ್ಯುತ್ ಕುಮಾರ್, ಸುಧಾರಾಣಿ, ರಚನಾ ಇಂದರ್, ಶೀತಲ್ ಶೆಟ್ಟಿ, ಆನಂದ್ ನೀನಾಸಂ, ಚಿತ್ಕಲಾ ಬಿರಾದರ್, ಮೂಗು ಸುರೇಶ್ ಈ ಚಿತ್ರದ ಮುಖ್ಯಭೂಮಿಕೆಯಲ್ಲಿ ಕಾಣಸಿಕೊಂಡಿದ್ದಾರೆ. ಡಾ. ಶಿವರಾಜ್ ಕುಮಾರ್ ಮಾತನಾಡಿ, 'ಅಪ್ಪಾಜಿಯವರ ಹುಟ್ಟುಹಬ್ಬದಂದು ನನ್ನ ಮಗಳ ಮೊದಲ ಚಿತ್ರ ಬಿಡುಗಡೆಯಾಗುತ್ತಿರುವುದು ನನಗೆ ತುಂಬಾ ವಿಶೇಷವಾದ ಕ್ಷಣ. ನಮ್ಮ ಕುಟುಂಬದ ಮೇಲೆ ಜನರು ತೋರಿಸಿರುವ ಎಲ್ಲಾ ಪ್ರೀತಿ ಅಪ್ಪಾಜಿಯವರಿಂದ ಬಂದಿದೆ. ಮತ್ತು ಮುಂದಿನ ಪೀಳಿಗೆಯ ಮೇಲೆ ಎಲ್ಲರೂ ಅದೇ ಪ್ರೀತಿಯನ್ನು ತೋರಿಸುವುದನ್ನು ನೋಡುವುದು ತುಂಬಾ ಖುಷಿ ಕೊಟ್ಟಿದೆ. ಎಲ್ಲಾ ಅಭಿಮಾನಿಗಳ, ಕನ್ನಡ ಸಿನಿಮಾ ಪ್ರೇಮಿಗಳ ನಿರಂತರ ಬೆಂಬಲಕ್ಕೆ ಧನ್ಯವಾದಗಳು ಎಂದರು.



## 'ಅಜ್ಞಾತವಾಸಿ'ಯ ಮೆಲೋಡಿ ಮಸ್ತಿ

ಹೇಮಂತ್ ರಾವ್ ನಿರ್ಮಾಣದ ಅಜ್ಞಾತವಾಸಿ ಸಿನಿಮಾದ ಮೆಲೋಡಿ ಗೀತೆ ಅನಾವರಣ ನಿರ್ದೇಶಕ ಹೇಮಂತ್ ರಾವ್ ತಮ್ಮದೇ ದಾಕ್ಷಾಯಿಣಿ ಟಾಕೀಸ್ ಪ್ರೊಡಕ್ಷನ್ ಹೌಸ್ ನಡಿ ನಿರ್ಮಿಸಿರುವ ಚೊಚ್ಚಲ ಸಿನಿಮಾ ಅಜ್ಞಾತವಾಸಿ ಬಿಡುಗಡೆಗೆ ಸಜ್ಜಾಗಿದೆ. ಏಪ್ರಿಲ್ 11ಕ್ಕೆ ರಾಜ್ಯಾದ್ಯಂತ ತೆರೆಗೆ ಬರುತ್ತಿರುವ ಈ ಚಿತ್ರದ ಮೆಲೋಡಿ ಹಾಡನ್ನು ಬಿಡುಗಡೆ ಮಾಡಲಾಗಿದೆ. ಸರಿಗಮ ಕನ್ನಡ ಯೂಟ್ಯೂಬ್‌ನಲ್ಲಿ ನಗುವಿನ ನೇಸರ ಎಂಬ ಮೆಲೋಡಿ ಗೀತೆಯನ್ನು ಅನಾವರಣ ಮಾಡಲಾಗಿದೆ. ಪ್ರಮೋದ್ ಮರವಂತೆ ಸಾಹಿತ್ಯದ ಹಾಡಿಗೆ ಸುನಿಧಿ ಗಣೇಶ್ ಧ್ವನಿಯಾಗಿದ್ದು, ಚರಣ್ ರಾಜ್ ಟ್ಯೂನ್ ಹಾಕಿದ್ದಾರೆ. ನಗುವಿನ ನೇಸರ ಹಾಡಿನಲ್ಲಿ ಪವನಾ ಗೌಡ ಮಿಂಚಿದ್ದಾರೆ. ಅಜ್ಞಾತವಾಸಿ ಚಿತ್ರಕ್ಕೆ 'ಗುಳ್ಟು' ಸಾರಥಿ ಜನಾರ್ಧನ್ ಚಿಕ್ಕಣ್ಣ ಆಕ್ಷನ್ ಕಟ್ ಹೇಳಿದ್ದಾರೆ. ಈಗಾಗಲೇ ಟೀಸರ್ ಒಳ್ಳೆ ರೆಸ್ಪಾನ್ಸ್ ಸಿಕ್ಕಿದ್ದು, ಈಗ ಹಾಡುಗಳ ಸರದಿ. ರಂಗಾಯಣ ರಘು ಮುಖ್ಯ ಭೂಮಿಕೆಯಲ್ಲಿ ಅಭಿನಯಿಸಿರುವ ಅಜ್ಞಾತವಾಸಿಯಲ್ಲಿ ಪಾವನ ಗೌಡ ಹಾಗೂ ಸಿದ್ದು ಮೂಲಿಮನಿ, ಶರತ್ ಲೋಹಿತಾಶ್ವ, ರವಿಶಂಕರ್ ಗೌಡ ಸೇರಿದಂತೆ ಹಲವರು ನಟಿಸಿದ್ದಾರೆ.



## ಅಪ್ಪು ಹುಟ್ಟುಹಬ್ಬಕ್ಕೆ ಎಕ್ಕ ಸಿನಿಮಾ ರಿಲೀಸ್

ಯುವ ಬಳಿಕ ಯುವರಾಜ್ ಕುಮಾರ್ ಎಕ್ಕ ಅವತಾರವೆತ್ತಿರುವುದು ಗೊತ್ತೇ ಇದೆ. ಶೂಟಿಂಗ್ ಹಂತದಲ್ಲಿಯೇ ಭಾರೀ ಹೈಪ್ ಕ್ರಿಯೇಪ್ ಕ್ರಿಯೇಟ್ ಮಾಡಿರುವ ಎಕ್ಕ ಸಿನಿಮಾದ ಮೊದಲ ಹಾಡು ಇಂದು ಪವರ್‌ಸ್ಟಾರ್ ಪುನೀತ್ ರಾಜ್‌ಕುಮಾರ್ ಹುಟ್ಟುಹಬ್ಬಕ್ಕೆ ಬಿಡುಗಡೆ ಮಾಡಲಾಗಿದೆ. ಆನಂದ್ ಆಡಿಯೋ ಯೂಟ್ಯೂಬ್‌ನಲ್ಲಿ ಎಕ್ಕ ಟೈಟಲ್ ಸಾಂಗ್ ಅನಾವರಣಗೊಂಡಿದೆ. ಎಕ್ಕಾ ಮಾರ್ ಮಾರ್ ಅಂತಾ ಯುವರಾಜ್ ಕುಮಾರ್ ಚಿಂದಿ ಪರ್ಫಾಮೆನ್ಸ್ ಕೊಟ್ಟಿದ್ದಾರೆ. ಬಾಬಾ ಭಾಸ್ಕರ್ ಕೊರಿಯೋಗ್ರಫಿಗೆ ಯುವ ಭರ್ಜರಿಯಾಗಿ ಕುಣಿದು ಕುಪ್ಪಳಿಸಿದ್ದಾರೆ. ನಾಗಾರ್ಜುನ್ ಶರ್ಮಾ ಕ್ಯಾಚಿ ಮ್ಯಾಚಿ ಪದಪೋಣಿಸಿ ಸಾಹಿತ್ಯ ಬರೆದಿದ್ದು, ಚರಣ್ ರಾಜ್ ಮ್ಯೂಸಿಕ್ ಕಿಕ್, ರೋಹಿತ್ ಪದಕಿ, ಚರಣ್‌ರಾಜ್ ಹಾಗೂ ಮಹಾಲಿಂಗ್ ವಿಎಂ ವಾಯ್ಸ್, ಯುವ ಎನರ್ಜಿ.. ಟೋಟಲ್ ಆಗಿ ಎಕ್ಕ ಟೈಟಲ್ ಟ್ರ್ಯಾಂಕ್ ಬೊಂಬಾಟ್ ಆಗಿ ಮೂಡಿಬಂದಿದೆ. ಪಿಆರ್‌ಕೆ ಪ್ರೊಡಕ್ಷನ್ಸ್, ಕೆಆರ್‌ಜಿ ಸ್ಟುಡಿಯೋಸ್ ಹಾಗೂ ಜಯಣ್ಣ ಫಿಲ್ಮ್ಸ್ ಒಟ್ಟಾಗಿ 'ಎಕ್ಕ' ಚಿತ್ರ ನಿರ್ಮಾಣ ಮಾಡುತ್ತಿವೆ.








# ನಮ್ಮೂರ ರಾಮಾಯಣದಿಂದ "ಕಾಂಚನ"ಳ ಹಿಂದೆ ಬಿದ್ದ ಮಂಡ್ಯ ನಾಗರಾಜ್..



'ನಮ್ಮೂರ ರಾಮಾಯಣ' ಚಿತ್ರದ ಮೂಲಕ ನಿರ್ದೇಶಕ ಮತ್ತು ನಿರ್ಮಾಪಕರಾಗಿ ಚಿತ್ರ ರಂಗಕ್ಕೆ ಪರಿಚಯವಾದ ಮಂಡ್ಯ ನಾಗರಾಜ್ ತನ್ನ ಹದಿನೆಂಟನೇ ಚಿತ್ರಕ್ಕೆ 'ಅವಳೆ ಕಾಂಚನ' ಎಂದು ಹೆಸರಿಟ್ಟಿದ್ದಾರೆ. ಈ ಚಿತ್ರದ ಟ್ರೇಲರನ್ನು ಹಿರಿಯ ಪತ್ರಕರ್ತ ಕೆ.ಜೆ.ಕುಮಾರ್ ಇತ್ತೀಚೆಗೆ ಬಿಡುಗಡೆ ಮಾಡಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್ ಉಪಸ್ಥಿತರಿದ್ದರು. ಜನಾರ್ಧನ್ ನಾಯಕನಾಗಿ ಪರಿಚಯವಾಗುತ್ತಿದ್ದರೆ ಪೋಷಕ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದ ಪ್ರಿಯಾನಾಗಣ್ಣ ನಾಯಕಿಯಾಗಿ ಬಡ್ತಿ ಹೊಂದಿದ್ದಾರೆ. ಖಳನಾಗಿ ಭೀಮಣ್ಣನಾಯಕ, ಉಪ ನಾಯಕಿಯಾಗಿ ಹರಿಣಿ ನಟರಾಜ್ ಉಳಿದಂತೆ ಅಪೂರ್ವ, ನಿತ್ಯ, ಶಂಕರಣ್ಣ, ರಂಗಸ್ವಾಮಿ, ಹನುಮನಗೌಡ, ಜಗನ್ನಾಥಶೆಟ್ಟಿ, ಶಂಕರೆಗೌಡ ಮುಂತಾದವರು ಅಭಿನಯಿಸಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಕೆ.ಜೆ.ಕುಮಾರ್,



ಐವತ್ತು ವರ್ಷಗಳಿಂದ ಚಿತ್ರರಂಗವನ್ನು ನೋಡುತ್ತಾ ಬಂದಿದ್ದೇನೆ. ಇಪ್ಪತ್ತೈದು ವರ್ಷಗಳಿಂದ ನಾಗರಾಜ್ ಅವರು ಬಣ್ಣದ ಲೋಕದಲ್ಲಿ ಇರುವುದರಿಂದ ಒಳ್ಳೆ ಚಿತ್ರ ಮಾಡಿರುತ್ತಾರೆ. ಇಂತಹ ಸಣ್ಣ ಬಜೆಟ್ ಸಿನಿಮಾಗಳು ಗೆಲ್ಲಬೇಕು. ಎಲ್ಲರಿಗೂ ಒಳ್ಳೆಯದಾಗಲಿ ಅಂತ ಹರಿಸಿದರು. ಎನ್ನಾರ್ ಕೆ ವಿಶ್ವನಾಥ್ ಮಾತನಾಡಿ ನಾಗರಾಜ್ ಅವರು ಮೂರು ದಶಕಗಳಿಂದ ಪರಿಚಿತರು. ಅಂದಿನಿಂದ ಇಲ್ಲಿಯವರೆಗೂ ಒಂಚೂರು ಬದಲಾವಣೆ ಕಂಡಿಲ್ಲ. ಸಿನಿಮಾ ಓಡುತ್ತೋ ಇಲ್ಲವೋ, ಜನರು ಗೆಲ್ಲಿಸುತ್ತಾರೋ ಎಂಬುದನ್ನು ನೋಡದೆ ಯಾವುದೇ ಸ್ವಾರ್ಥ ಇಲ್ಲದೆ ನಿರಂತರವಾಗಿ ಚಿತ್ರಗಳನ್ನು ಮಾಡುತ್ತಾ ಬಂದವರು. ಇದು ಖುಷಿ ಪಡುವ ವಿಷಯ. ಹೊಸ ಪ್ರತಿಭೆಗಳಿಗೆ ಅವಕಾಶ ಕೊಟ್ಟಿದ್ದಾರೆ. ಅಲ್ಲದೆ ನಿರ್ದೇಶಕರ ಸಂಘದ ಉಪಸಮಿತಿ ಸದಸ್ಯರು. ಇವರಿಗೆ ಶುಭವಾಗಲಿ ಎಂದರು.

# ಶಶಿಕುಮಾರ್ ಅವರ 'ಕಂಗ್ರಾಜುಲೇಷನ್ಸ್ ಬ್ರದರ್'

ಸಾಮಾಜಿಕ ಮಾಧ್ಯಮದಲ್ಲಿ ಸಾಕಷ್ಟು ಸದ್ದು ಮಾಡಿರುವ ಡೈಲಾಗ್ "ಕಂಗ್ರಾಜುಲೇಷನ್ಸ್ ಬ್ರದರ್". ಕಳೆದ ಮೂರು ತಿಂಗಳ ಹಿಂದೆ ಇದೇ ಹೆಸರಿನಲ್ಲಿ ಚಿತ್ರ ಆರಂಭವಾಗಿದ್ದು ಎಲ್ಲರಿಗೂ ತಿಳಿದ ಸಂಗತಿ. ಈಗ ಶೀರ್ಷಿಕೆಯಲ್ಲೇ ಕುತೂಹಲ ಮೂಡಿಸಿರುವ ಈ ಚಿತ್ರದ ಚಿತ್ರೀಕರಣ ನಿಗದಿಯಂತೆ ಪೂರ್ಣವಾಗಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಬಿರುಸಿನಿಂದ ಸಾಗಿದೆ. ಮುಂದಿನ ತಿಂಗಳು ಚಿತ್ರದ ಮೊದಲ ಹಾಡು ದುಬೈನಲ್ಲಿ ಬಿಡುಗಡೆಯಾಗಲಿದೆ. ಬಹುತೇಕ ಹೊಸ ಪ್ರತಿಭೆಗಳ ಜೊತೆಗೆ ಹಿರಿಯ ನಟ ಶಶಿಕುಮಾರ್ ನಟಿಸಿದ್ದಾರೆ. ಚಿತ್ರೀಕರಣ ಪೂರ್ಣವಾದ ವಿಚಾರವನ್ನು ಹಾಗೂ ಚಿತ್ರದ ಕುರಿತು ಸಾಕಷ್ಟು ವಿಷಯಗಳನ್ನು ಚಿತ್ರತಂಡದ ಸದಸ್ಯರು ಪತ್ರಿಕಾಗೋಷ್ಠಿಯಲ್ಲಿ ಹಂಚಿಕೊಂಡರು. ಕಲ್ಲೂರ್ ಸಿನಿಮಾ & ಪೆನ್ ಎನ್ ಪೇಪರ್ ಸ್ಟುಡಿಯೋಸ್ ಲಾಂಛನದಲ್ಲಿ ಪ್ರಶಾಂತ್ ಕಲ್ಲೂರ್ ನಿರ್ಮಿಸಿರುವ ಈ ಚಿತ್ರವನ್ನು ಪ್ರತಾಪ್ ಗಂಧರ್ವ ನಿರ್ದೇಶಿಸಿದ್ದಾರೆ.



# 'ಪೀಟರ್'ಗಾಗಿ ಕನ್ನಡಕ್ಕೆ ಮಲಯಾಳಂ ಗಾಯಕ..

'ದೂರದರ್ಶನ' ಸಿನಿಮಾ ಮೂಲಕ ಭರವಸೆ ಮೂಡಿಸಿದ್ದ ನಿರ್ದೇಶಕ ಸುಕೇಶ್ ಶೆಟ್ಟಿ ಈಗ ಪೀಟರ್ ಹಿಂದೆ ಬಿದ್ದಿದ್ದಾರೆ. ಸುಕೇಶ್ ಎರಡನೇ ಪ್ರಯತ್ನ ಪೀಟರ್ ಚಿತ್ರ ಈಗಾಗಲೇ ಸಾಕಷ್ಟು ವಿಚಾರಗಳಿಂದ ಸುದ್ದಿಯಲ್ಲಿದೆ. ಇದೀಗ ಚಿತ್ರತಂಡ ಮಲಯಾಳಂನ ಖ್ಯಾತ ಗಾಯಕ ಪ್ರಣವಂ ಸಸಿ ಅವರನ್ನು ಪೀಟರ್‌ಗಾಗಿ ಕನ್ನಡಕ್ಕೆ ಕರೆತಂದಿದ್ದಾರೆ. ಮಾಲಯಾಳಂ ಹಿಟ್ ಸಿನಿಮಾ ಆವೇಶಂ ಹಾಡಿಗೆ ಧ್ವನಿಯಾಗಿದ್ದ, ಕನ್ನಡದ ಪ್ರೇಮ್ ನಿರ್ದೇಶನದ ಕೆ ಡಿ ಸಿನಿಮಾದ "ಶಿವ ಶಿವ" ಮಲಯಾಳಂ ವರ್ಷನ್ ಹಾಡು ಹಾಗೂ ಪುಷ್ಪ–2 ಸಿನಿಮಾದ "ಪೀಲಿಂಗ್" ಸಾಂಗ್‌ಗೆ ಕಂಠ ನೀಡಿ ಎಲ್ಲರನ್ನ ಕುಣಿಸಿದ್ದ ಪ್ರಣವಂ ಸಸಿ, ಪೀಟರ್ ಸಿನಿಮಾದ ವಿಶೇಷ ಹಾಡಿಗೆ ಧ್ವನಿಯಾಗಿದ್ದಾರೆ. ಈ ಮೂಲಕ ಪ್ರಣವಂ ಸಸಿ ಸ್ಯಾಂಡಲ್‌ವುಡ್ ಅಂಗಳಕ್ಕೆ ಕಾಲಿಟ್ಟಿದ್ದಾರೆ. ರುತ್ವಿಕ್ ಮುರುಳಿಧರ್ ಸಂಗೀತ ನಿರ್ದೇಶನದ ಹಾಗೂ ತ್ರಿಲೋಕ್ ತ್ರಿವಿಕ್ರಮ್ ಸಾಹಿತ್ಯಕ್ಕೆ ಪ್ರಣವಂ ಧ್ವನಿಯಾಗಿದ್ದಾರೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212